ಸಂಪುಟ : 9 ಸಂಚಿಕೆ 271 ಪುಟ : 4 ಬೆಲೆ: 3.00 ರವಿವಾರ ಡಿಸೆಂಬರ್ 8 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 271 Pages : 4 Price : 3.00 Sunday December 8 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ವಿಶ್ವ ಏಡ್ಸ್ ಜಾಗೃತಿ ದಿನ । ಜನಜಾಗೃತಿ ಕಾರ್ಯಕ್ರಮದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಕರೆ

## ಏಡ್ಸ್ ಪೀಡಿತರನ್ನು ಅವಮಾನಿಸದೇ ಗೌರವದಿಂದ ಕಾಣಬೇಕು

**■ ವಿಜಯಸಾಕ್ಷಿ ಸುದ್ದಿ, ಗದಗ**


ಗದಗ ಜಿಲ್ಲೆಯನ್ನು ಏಡ್ಸ್ ಮುಕ್ತ ಜಿಲ್ಲೆಯನ್ನಾಗಿಸಲು ಎಲ್ಲರೂ ಪಣ ತೊಡಬೇಕು ಎಂದು ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಹೇಳಿದರು.

ನಗರದ ಡಿಜಿಎಂ ಆಯುರ್ವೇದ ಕಾಲೇಜನಲ್ಲಿ ಶನಿವಾರ ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಜಿಲ್ಲಾ ಏಡ್ಸ್ ತಡೆಗಟ್ಟುವಿಕೆ ಮತ್ತು ನಿಯಂತ್ರಣ ಘಟಕ, ಜಿಲ್ಲಾ ವಾರ್ತಾ ಮತ್ತು ಪ್ರಸಾರ ಇಲಾಖೆ, ಜಿಮ್ಸ್ ರಕ್ತ ನಿಧಿ ಕೇಂದ್ರ-ಜಿಲ್ಲಾ ಆಸ್ಪತ್ರೆ, ಬಸವೇಶ್ವರ ಪ್ಯಾರಾ ಮೆಡಿಕಲ್ ಕಾಲೇಜು, ಗಾಂಧೀಜಿ ಪ್ಯಾರಾ ಮೆಡಿಕಲ್ ಕಾಲೇಜು, ಪಾಲನಗಾಲಾ ನರ್ಸಿಂಗ್ ಕಾಲೇಜು, ಜಿಲ್ಲಾ ರೆಡ್ ಕ್ರಾಸ್ ಸಂಸ್ಥೆ, ಆಯ್.ಎಂ.ಎ ರಕ್ತ ಭಂಡಾರ, ರಕ್ಷಣೆ ಜಿಲ್ಲಾ ಮಹಿಳಾ ಒಕ್ಕೂಟ, ಸೃಷ್ಟಿ ಸಂಕುಲ ಸಂಸ್ಥೆ, ನವಚೇತನ ಸಂಸ್ಥೆ, ಚೈತನ್ಯ ನಗರ ಮತ್ತು ಗ್ರಾಮೀಣಾಭಿವೃದ್ಧಿ ಸಂಸ್ಥೆ, ಶ್ರೀ ಡಿಜಿಎಂ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಹಾಗೂ ರೆಡ್ ರಿಬ್ಬನ್ ಕ್ಲಬ್ ಇವರುಗಳ ಸಂಯುಕ್ತ ಆಶ್ರಯದಲ್ಲಿ ಜರುಗಿದ ವಿಶ್ವ ಏಡ್ಸ್ ಜಾಗೃತಿ ದಿನದ ಜನಜಾಗೃತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಸಮಾಜದಲ್ಲಿ ಏಡ್ಸ್ ಸೋಂಕಿಗೆ ತುತ್ತಾದವರನ್ನು ಗುರುತಿಸಿ ಜಾಗೃತಿ ಮೂಡಿಸಿ, ಅನುಮಾನ-ಅವಮಾನ ಮಾಡದೇ ಅವರನ್ನು ಗೌರವದಿಂದ ಕಾಣಬೇಕು. ಈ ರೋಗ 10-15 ವರ್ಷದ ಹಿಂದೆ ಜಗತ್ತನ್ನು ತಲ್ಲಣಗೊಳಿಸಿತ್ತು. ಭಾರತದ ಬಿಸಿಲು ಇರುವ ಪ್ರದೇಶದ ಜನಾಂಗದಲ್ಲಿ ಈ ಸೋಂಕು ಜಾಸ್ತಿ ಕಾಣಿಸಿಕೊಂಡಿದ್ದು, ರೈಲು ಅಥವಾ ಸಾರ್ವಜನಿಕವಾಗಿ ಪ್ರಯಾಣ ಮಾಡುವಾಗ ಎಲ್ಲರಿಗೂ ಭಯ ಹುಟ್ಟಿಸಿ, ಏಡ್ಸ್ ರೋಗವು ಎಲ್ಲರನ್ನು ನಿರ್ನಾಮ ಮಾಡುತ್ತದೆ ಎನ್ನುವ ಊಹೆಗೆ ತಲುಪಿತ್ತು.

ಈಗಿನ ಅತ್ಯಾಧುನಿಕ ಚಿಕಿತ್ಸೆ, ಉಪಚಾರ, ಭಾರತೀಯ ವೈದ್ಯ ಪದ್ಧತಿಗಳು ನಿಯಂತ್ರಣ ಮತ್ತು ನಿರ್ಮೂಲನೆಗೆ ದೊಡ್ಡ ಕೊಡುಗೆ ನೀಡಿದೆ. ಏಡ್ಸ್ ರೋಗಕ್ಕೆ ಔಷಧಿ ಕಂಡುಹಿಡಿಯಲು ಶ್ರಮಿಸಿದ ಎಲ್ಲರಿಗೂ ಅತ್ಯಂತ ಋಣಿಯಾಗಿರಬೇಕು ಎಂದು ಅಭಿನಂದನೆ ಸಲ್ಲಿಸಿದರು.

> ಕಾರ್ಯಕ್ರಮಕ್ಕೂ ಮುನ್ನ ವಿಶ್ವ ಏಡ್ಸ್ ಜಾಗೃತಿ ದಿನದ ಜನಜಾಗೃತಿ ಜಾಥಾಕ್ಕೆ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಸಿ.ಎಸ್. ಶಿವನಗೌಡ್ರ ಚಾಲನೆ ನೀಡಿದರು. ಜಾಥಾವು ನಗರದ ಪ್ರಮುಖ ವೃತ್ತಗಳಲ್ಲಿ ಸಂಚರಿಸಿ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಿತು. ಈ ಸಂದರ್ಭದಲ್ಲಿ ಜೈ ಭೀಮ ಕಲಾತಂಡದವರು ಹೆಚ್ಐವಿ ಬಗ್ಗೆ ಅರಿವು ಮೂಡಿಸುವ ಹಾಡುಗಳನ್ನು ಹಾಡುತ್ತ ಜಾಥಾದಲ್ಲಿ ಪಾಲ್ಗೊಂಡಿದ್ದರು.



> ಏಡ್ಸ್ ನಿರ್ಮೂಲನೆಗೆ ಜಿಲ್ಲೆ ತನ್ನದೇ ಆದ ಕೊಡುಗೆ ನೀಡಿದೆ. ಕಳೆದ 10 ವರ್ಷಗಳಲ್ಲಿ ಭವಿಷ್ಯದ ನಾಗರಿಕನಾದ ಯಾವೊಂದು ನವ ಶಿಶುವಿಗೂ ಏಡ್ಸ್ ಸೋಂಕು ಪಾಲಕರಿಂದ ತಗುಲದ ರೀತಿಯಲ್ಲಿ ನೋಡಿಕೊಂಡಿದ್ದಾರೆ. ಜಿಲ್ಲಾ ಏಡ್ಸ್ ತಡೆಗಟ್ಟುವಿಕೆ ಮತ್ತು ನಿಯಂತ್ರಣ ಘಟಕ ಸೇರಿದಂತೆ ಏಡ್ಸ್ ಮುಕ್ತ ಜಿಲ್ಲೆಯನ್ನಾಗಿಸಲು ಎಲ್ಲರೂ ಶ್ರಮಿಸಬೇಕು ಎಂದು ಸಚಿವ ಎಚ್.ಕೆ. ಪಾಟೀಲ ಅಧಿಕಾರಿಗಳಿಗೆ ಸೂಚಿಸಿದರು.

ಏಡ್ಸ್ ಕುರಿತು ಜಾಗೃತಿ ಮೂಡಿಸಲು ಮೆಡಿಕಲ್ ಶಾಲಾ ಕಾಲೇಜು, ಸೇವಾ ತಂಡಗಳ ಪಾತ್ರ ದೊಡ್ಡದಿದೆ. ಯೋಜನೆ ತಯಾರಿಸಿ ಬೃಹತ್ ಕಾರ್ಯಕ್ರಮವನ್ನು ಆಯೋಜಿಸಿ ಸಾರ್ವಜನಿಕರನ್ನು ಜಾಗೃತರನ್ನಾಗಿಸಬೇಕು. ಅದಕ್ಕೆ ಬೇಕಾದ ಎಲ್ಲಾ ಸಹಕಾರ ಸರ್ಕಾರದಿಂದ ನೀಡಲಾಗುವುದು ಎಂದು ಜಿಲ್ಲಾ ಉಸ್ತುವಾರಿ ಸಚಿವರು ತಿಳಿಸಿದರು.

ಡಿಎಚ್ಓ ಎಸ್ಎಸ್ ನೀಲಗುಂದ ಮಾತನಾಡಿ, ಜಿಲ್ಲೆಯಲ್ಲಿ ಏಡ್ಸ್ ಸೋಂಕಿಗೆ ತುತ್ತಾದವರ ಚಿಕಿತ್ಸೆಗೆ 8 ಐಸಿಟಿಸಿ ಕೇಂದ್ರಗಳಲ್ಲಿ ಎಲ್ಲಾ ರೀತಿಯ ಮೂಲ ಸೌಕರ್ಯಗಳು ಲಭ್ಯವಿದೆ. ಏಡ್ಸ್ ಮುಕ್ತ ಜಿಲ್ಲೆಯನ್ನಾಗಿಸಲು ಎಲ್ಲರೂ ಪ್ರಾಮಾಣಿಕ ಕೆಲಸ ಮಾಡುತ್ತಿದ್ದೇವೆ. 100 ದಿನಗಳ ಟಿಬಿ ಕುರಿತು ಅಭಿಯಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕೆಂದರು.

ಇದೇ ಸಂದರ್ಭದಲ್ಲಿ ಗದಗ ಜಿಲ್ಲೆಯಲ್ಲಿ ಹೆಚ್ಐವಿ ನಿಯಂತ್ರಣದಲ್ಲಿ ಉತ್ತಮ ಸೇವೆ ಸಲ್ಲಿಸಿದ ವಿವಿಧ ತಾಲೂಕಿನ ಆರೋಗ್ಯ ಇಲಾಖೆ ಸಿಬ್ಬಂದಿಗಳನ್ನು ಸನ್ಮಾನಿಸಲಾಯಿತು.

> ಜಿಲ್ಲಾ ಏಡ್ಸ್ ನಿಯಂತ್ರಣಾಧಿಕಾರಿ ಡಾ. ಅರುಂಧತಿ ಕುಲಕರ್ಣಿ ಮಾತನಾಡಿ, ಇಲಾಖೆಯ ಹಲವಾರು ಜಾಥಾ ಹಾಗೂ ಜಾಗೃತಿ ಕಾರ್ಯಕ್ರಮಗಳಿಂದ ಎಚ್ಐವಿ ಸೋಂಕಿನ ಪ್ರಮಾಣ ಕಳೆದ ಹತ್ತು ವರ್ಷಗಳಲ್ಲಿ ಗಣನೀಯವಾಗಿ ಇಳಿಕೆ ಕಂಡಿದೆ. ಎಚ್ಐವಿ ಸೋಂಕಿತರು ಭಯಪಡದೆ ಆಪ್ತಸಮಾಲೋಚಕರಿಂದ ನೈತಿಕ ಹಾಗೂ ಮಾನಸಿಕ ಬೆಂಬಲ ಪಡೆದು ಸಾಮಾನ್ಯ ಜೀವನ ನಡೆಸಬೇಕು ಎಂದು ಹೇಳಿದರು.

ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರ್‌ಸಾಬ ಬಬರ್ಚಿ, ಅಶೋಕ ಮಂದಾಲಿ, ಬಿ.ಎಸ್.ಪಾಟೀಲ, ಕಾಲೇಜಿನ ಪ್ರಾಚಾರ್ಯ ಸಂತೋಷ ಬೆಳವಡಿ, ಜಿಲ್ಲಾ ಶಸ್ತ್ರ ಚಿಕಿತ್ಸಕರಾದ ಡಾ. ಬಿ.ಸಿ. ಕರಿಗೌಡರ, ಡಾ. ಸಾಮುದ್ರಿ ಸತೀಶ ಘಾಟಗೆ, ಡಾ. ಪ್ರೀತ ಖೋನಾ, ಡಾ. ಮಹ್ಮದ್ ಅಶ್ರಫ್ ಉಲ್, ಡಾ. ಮಹೇಶ ಕೊಪ್ಪಳ, ಡಾ. ಬೂದೇಶ ಸೇರಿದಂತೆ ವಿದ್ಯಾರ್ಥಿಗಳು ಹಾಜರಿದ್ದರು.

ಬಸವರಾಜ ಲಾಲಗಟ್ಟಿ ಸ್ವಾಗತಿಸಿದರು. ಭೂಮಿಕಾ ತ್ರೈಯಬಾ ಕಾರ್ಯಕ್ರಮ ನಿರೂಪಿಸಿದರು.



## ತಿರುಪತಿ ತಿಮ್ಮಪ್ಪನಿಗೆ ಮುಡಿ ಕೊಟ್ಟ ಶಿವರಾಜ್ ಕುಮಾರ್ ದಂಪತಿ

**■ ವಿಜಯಸಾಕ್ಷಿ ಸುದ್ದಿ, ತಿರುಪತಿ**

ನಟ ಹ್ಯಾಟ್ರಿಕ್ ಹೀರೋ ಶಿವರಾಜ್ ಕುಮಾರ್ ಕುಟುಂಬ ಸಮೇತ ಬೆಳ್ಳಂಬೆಳಗ್ಗೆ ತಿರುಪತಿ ತಿಮ್ಮಪ್ಪನ ದೇವಸ್ಥಾನಕ್ಕೆ ತೆರಳಿದರು. ಈ ವೇಳೆ ಶಿವಣ್ಣ ಹಾಗೂ ಅವರ ಪತ್ನಿ ಗೀತಾ ಶಿವರಾಜ್ ಕುಮಾರ್ ತಿಮ್ಮಪ್ಪನಿಗೆ ಮುಡಿ ನೀಡಿದ್ದಾರೆ.

ಇತ್ತೀಚೆಗೆ ಶಿವಣ್ಣ ನಟನೆಯ ಭೈರತಿ ರಣಗಲ್ ಸಿನಿಮಾ ಬಿಡುಗಡೆಯಾಗಿ ಯಶಸ್ಸು ಕಂಡಿದೆ. ಮತ್ತೊಂದೆಡೆ ಶಿವರಾಜ್ ಕುಮಾರ್ ಅವರಿಗೆ ಅನಾರೋಗ್ಯದ ಸಮಸ್ಯೆ ಕಾಡುತ್ತಿದೆ. ಅದರ ಚಿಕಿತ್ಸೆಗಾಗಿ ಸದ್ಯದಲ್ಲೇ ಅಮೆರಿಕಾಗೆ ತೆರಳಲಿದ್ದಾರೆ.

ಈ ಹಿನ್ನೆಲೆಯಲ್ಲಿ ಅವರು ತಿಮ್ಮಪ್ಪನ ದರ್ಶನ ಪಡೆದು ದೇವರಿಗೆ ಮುಡಿ ಕೊಟ್ಟಿದ್ದಾರೆ.

ಶಿವಣ್ಣ ಕುಟುಂಬದ ಜೊತೆ ನಿರ್ಮಾಪಕ ಕೆ.ಪಿ.ಶ್ರೀಕಾಂತ್, ಹಾಗೂ ಶಿವಣ್ಣ ಪುತ್ರಿ ನಿವೇದಿತಾ ಸಹ ತಿಮ್ಮಪ್ಪನ ದರ್ಶನ ಪಡೆದಿದ್ದಾರೆ.

### 100 ದಿನಗಳ ಕ್ಷಯ ಮುಕ್ತ ಭಾರತ ಅಭಿಯಾನಕ್ಕೆ ಚಾಲನೆ ನೀಡಿದ ಸಚಿವ ಎಚ್.ಕೆ. ಪಾಟೀಲ

## ಟಿಬಿ ಮುಕ್ತ ಜಿಲ್ಲೆಯನ್ನಾಗಿಸಲು ಶ್ರಮವಹಿಸಿ

**■ ವಿಜಯಸಾಕ್ಷಿ ಸುದ್ದಿ, ಗದಗ**

ಭಾರತದಲ್ಲಿ ದಿನೇ ದಿನೇ ಟಿಬಿ ರೋಗವು ಉಲ್ಬಣಗೊಳ್ಳುತ್ತಿದ್ದು, ಅದಕ್ಕೆ ತಕ್ಕಂತೆ ಸರ್ಕಾರವು ಅನೇಕ ಯೋಜನೆಗಳನ್ನು ಕೈಗೊಂಡಿದೆ. ಟಿಬಿ ಮುಕ್ತ ಭಾರತವನ್ನಾಗಿ ಮಾಡಲು ಸಂಬಂಧಪಟ್ಟ ಸಿಬ್ಬಂದಿಯವರ ಶ್ರಮ ಶ್ಲಾಘನೀಯ. ಮುಂದಿನ ದಿನಮಾನಗಳಲ್ಲಿ ಇದೇ ರೀತಿ ನಿರಂತರವಾಗಿ ಶ್ರಮವಹಿಸಿದಲ್ಲಿ ಟಿಬಿ ಮುಕ್ತ ಜಿಲ್ಲೆಯನ್ನಾಗಿ ಮಾಡಲು ಸಾಧ್ಯ ಎಂದು ಕಾನೂನು, ನ್ಯಾಯ ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಕರೆ ನೀಡಿದರು.

ಇಲ್ಲಿನ ಡಿಜಿಎಂ ಆಯುರ್ವೇದಿಕ್ ಕಾಲೇಜಿನಲ್ಲಿ ಶನಿವಾರ 100 ದಿನಗಳ ಕ್ಷಯ ಮುಕ್ತ ಭಾರತ ಅಭಿಯಾನ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಜಿಲ್ಲಾ ಕ್ಷಯರೋಗ ನಿರ್ಮೂಲನಾ ಅಧಿಕಾರಿ ಡಾ. ಅರುಂಧತಿ ಕುಲಕರ್ಣಿ ಪ್ರಾಸ್ತಾವಿಕವಾಗಿ ಮಾತನಾಡಿ, ಕ್ಷಯರೋಗದ ಬಗ್ಗೆ ಸಂಪೂರ್ಣವಾಗಿ ವಿವರಿಸಿದರು. ಕಾರ್ಯಕ್ರಮದಲ್ಲಿ ಪಾಲ್ಗೊಂಡ ಸರ್ವರೂ ಟಿಬಿ ಮುಕ್ತ ಭಾರತ ಪ್ರಮಾಣವಚನವನ್ನು ಸ್ವೀಕರಿಸಿದರು.ಜೈ ಭೀಮ ಕಲಾ ತಂಡದವರು ಕ್ಷಯರೋಗ ಕುರಿತು ಅರಿವು ಮೂಡಿಸುವ ಜಾನಪದ ಹಾಡುಗಳನ್ನು ಹಾಡಿದರು.



ಮುಂಜಾನೆ ವಿದ್ಯಾರ್ಥಿಗಳಿಂದ ಜಾಥಾ ನೆರವೇರಿಸಲಾಯಿತು. ಕಾರ್ಯಕ್ರಮದಲ್ಲಿ ಜಿಲ್ಲಾ ಶಸ್ತ್ರಚಿಕಿತ್ಸಕ ಡಾ. ಬಿ.ಸಿ. ಕರಿಗೌಡರ, ಜಿಲ್ಲಾ ಕ್ಷಯರೋಗ ನಿರ್ಮೂಲನಾ ಅಧಿಕಾರಿ ಡಾ. ಅರುಂಧತಿ ಕೆ., ತಾಲೂಕಾ ಆರೋಗ್ಯಾಧಿಕಾರಿ ಡಾ.ಸಂತೋಷ್ ಬೆಳವಡಿ, ಡಾ. ಪ್ರೀತ ಖೋನಾ, ಇಂಡಿಯನ್ ರೆಡ್ ಕ್ರಾಸ್ ಗದಗ ಕಾರ್ಯದರ್ಶಿ ಡಾ. ಸಾಮುದ್ರಿ, ಡಾ. ಮಹ್ಮದ್‌ಅಶ್ರಫ್‌ಉಲ್, ರೂಪಸೇನ್ ಚವ್ಹಾಣ, ಡಿ.ಜಿ.ಎಂ. ಕಾಲೇಜಿನ ಕಾರ್ಯದರ್ಶಿ ಡಾ. ಬಿಎಸ್. ಪಾಟೀಲ, ವಿಶ್ವ ಆರೋಗ್ಯ ಸಲಹೆಗಾರ ಡಾ. ಸತೀಶ್ ಘಾಟಗೆ, ಗದಗ ತಾಲೂಕಾ ಗ್ಯಾರಂಟಿ ಯೋಜನಾ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ, ತಹಸೀಲ್ದಾರ ಶ್ರೀನಿವಾಸ ಮೂರ್ತಿ ಹಾಗೂ ಆರೋಗ್ಯ ಇಲಾಖೆಯ ಎಲ್ಲ ಸಿಬ್ಬಂದಿ ಹಾಗೂ ಎನ್.ಟಿ.ಇ.ಪಿ ಸಿಬ್ಬಂದಿಗಳು ಪಾಲ್ಗೊಂಡಿದ್ದರು.

> ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಎಸ್.ಎಸ್. ನೀಲಗುಂದ ಮಾತನಾಡಿ, ಎಲ್ಲ ಸಿಬ್ಬಂದಿಗಳು ಅಭಿಯಾನವನ್ನು ಯಶಸ್ವಿಗೊಳಿಸಿ ಜನರಿಗೆ ಅರಿವು ಮೂಡಿಸಲು ಮುಂದಾಗಬೇಕೆಂದು ತಿಳಿಸಿದರು.

## ಲಿಂಗಧಾರಣೆ, ದೊಡ್ಡಾಟ ಪ್ರದರ್ಶನ ನಾಳೆ



**■ ವಿಜಯಸಾಕ್ಷಿ ಸುದ್ದಿ, ಗದಗ**

ಬೆಟಗೇರಿಯ ಶ್ರೀ ಗೌರಿಶಂಕರ ದೇವಸ್ಥಾನದಲ್ಲಿ ಕಾರ್ತಿಕೋತ್ಸವದ ನಿಮಿತ್ತ ಡಿ. 9ರಂದು ಲಿಂಗಧಾರಣೆ ಹಾಗೂ 'ಶ್ರೀದೇವಿ ಮಹಾತ್ಮೆ' ದೊಡ್ಡಾಟ ಪ್ರದರ್ಶನ ಹಮ್ಮಿಕೊಳ್ಳಲಾಗಿದೆ ಎಂದು ಗೌರಿಗುಡಿ ವೀರಶೈವ ಸಮಾಜದ ಅಧ್ಯಕ್ಷ ಶರಣಬಸಪ್ಪ ಗುಡಿಮನಿ ಹೇಳಿದರು.

ಶನಿವಾರ ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಡಿ. 9ರಂದು ಬೆಳಿಗ್ಗೆ ಓಂಕಾರೇಶ್ವರ ಹಿರೇಮಠದ ಫಕೀರೇಶ್ವರ ಶಿವಾಚಾರ್ಯರ ಸಾನ್ನಿಧ್ಯದಲ್ಲಿ ಲಿಂಗಧಾರಣೆ ಕಾರ್ಯಕ್ರಮ ನಡೆಯಲಿದೆ. ಮಾಂತಯ್ಯಸ್ವಾಮಿ ಸೋಮಶೇಖರಮಠ, ಶರಣಯ್ಯ ಶಿವಪ್ಪಯ್ಯನಮಠ ನೇತೃತ್ವ ವಹಿಸಲಿದ್ದಾರೆ. ಅಂದು ಸಂಜೆ 6 ಗಂಟೆಗೆ ಕಾರ್ತಿಕೋತ್ಸವ, ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮ ನಡೆಯಲಿದೆ ಎಂದರು.

ಅಶೋಕ ಸುತಾರ ಮಾತನಾಡಿ, ರಾಮಾಯಣ-ಮಹಾಭಾರತವನ್ನು ಜನಸಾಮಾನ್ಯರಿಗೆ ತಲುಪಿಸುವಲ್ಲಿ ದೊಡ್ಡಾಟ ಪ್ರಮುಖ ಪಾತ್ರ ವಹಿಸಿದೆ. ನಶಿಸುತ್ತಿರುವ ಈ ಜಾನಪದ ಕಲೆಯನ್ನು ಉಳಿಸುವ ಉದ್ದೇಶದಿಂದ ಅಶ್ರೀದೇವಿ ಮಾಹಾತ್ಮೆ ಎನ್ನುವ ದೊಡ್ಡಾಟವನ್ನು ರಾತ್ರಿ 8 ಗಂಟೆಗೆ ಪ್ರದರ್ಶಿಸಲಾಗುವುದು ಎಂದರು.

ಕಾರ್ಯಕ್ರಮದ ಸಾನ್ನಿಧ್ಯವನ್ನು ಹೊಸಳ್ಳಿಯ ಅಭಿನವ ಬೂದೀಶ್ವರ ಸ್ವಾಮೀಜಿ ವಹಿಸುವರು. ಮಾಜಿ ಶಾಸಕ ಡಿ.ಆರ್. ಪಾಟೀಲ ಉದ್ಘಾಟಿಸುವರು. ಅನೇಕ ಗಣ್ಯರು ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ ಎಂದರು.

ಶ್ರೀ ಗೌರಿಶಂಕರ ದೇವಸ್ಥಾನ ಸೇವಾ ಸಮಿತಿ, ಗೌರಿಗುಡಿ ಓಣಿ ವೀರಶೈವ ಸಮಾಜ, ಬನ್ನಿಮಹಾಂಕಾಳಿ ಭಜನಾ ಮಂಡಳಿ, ಗೌರಿಗಣೇಶ ಶಿಕ್ಷಣ ಸಂಸ್ಥೆ, ಕಿತ್ತೂರ ರಾಣಿ ಚನ್ನಮ್ಮ ಮಹಿಳಾ ಸಂಘದ ಸಹಯೋಗದಲ್ಲಿ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದರು.

ಸುದ್ದಿಗೋಷ್ಠಿಯಲ್ಲಿ ಶಿವಾನಂದ ನಾಗರಾಳ, ಸುಭಾಸ ಮಳಗಿ, ಅಶೋಕ ಸುತಾರ, ಶರಣಬಸಪ್ಪ ಗುಡಿಮನಿ, ಶಿವಪುತ್ರಪ್ಪ ಬೆಂತೂರ, ಶರಣಪ್ಪ ಅಣ್ಣಿಗೇರಿ, ಬಸವರಾಜ ಕುಂದಗೋಳ, ಸಿದ್ದಲಿಂಗೇಶ ಮುಳ್ಳಾಲ, ಸುದೀಪ ಕಣವಿ, ಪ್ರಕಾಶ ಮ್ಯಾಗೇರಿ ಮುಂತಾದವರು ಉಪಸ್ಥಿತರಿದ್ದರು.

### ರಾಷ್ಟ್ರಮಟ್ಟದ ಅಣುಕು ನ್ಯಾಯಾಲಯ ಸ್ಪರ್ಧೆಯ ಬಹುಮಾನ ವಿತರಣಾ ಸಮಾರಂಭದಲ್ಲಿ ಸಚಿವ ಎಚ್.ಕೆ. ಪಾಟೀಲ

## ಕಕ್ಷಿದಾರರಿಗೆ ನ್ಯಾಯ ಒದಗಿಸುವುದು ವಕೀಲರ ಕರ್ತವ್ಯ

**■ ವಿಜಯಸಾಕ್ಷಿ ಸುದ್ದಿ, ಗದಗ/ಹುಬ್ಬಳ್ಳಿ**

ನ್ಯಾಯಕ್ಕಾಗಿ ನಿತ್ಯ ಸಾವಿರಾರು ಪ್ರಕರಣಗಳು ನ್ಯಾಯಾಲಯದ ಮುಂದೆ ಬರುತ್ತಿದ್ದು, ಸೂಕ್ತ ಸಮಯದಲ್ಲಿ ತ್ವರಿತವಾಗಿ ನ್ಯಾಯದಾನ ಒದಗಿಸುವ ನಿಟ್ಟಿನಲ್ಲಿ ವಕೀಲರು ಮತ್ತು ನ್ಯಾಯಾಧೀಶರು ಶ್ರಮಿಸಬೇಕಾಗಿದೆ.




> ಇತ್ತೀಚೆಗೆ ನ್ಯಾಯಾಲಯಗಳಲ್ಲಿ ತತ್ವರಿತಗತಿಯಲ್ಲಿ ನ್ಯಾಯ ದೊರೆಯಬೇಕೆಂದು ಜನರು ಹೆಸರಾಂತ ವಕೀಲರಿಗೆ ಅವರು ಕೇಳಿದಷ್ಟು ದುಡ್ಡು ಕೊಟ್ಟು ಕರೆದುಕೊಂಡು ಬಂದು ನ್ಯಾಯಾಲಯಗಳಲ್ಲಿ ತಾವು ಹೂಡಿದ ದಾವೆಗಳನ್ನು ಕೇವಲ 6 ತಿಂಗಳಗಳಲ್ಲಿ ಇತ್ಯರ್ಥಪಡಿಸಿಕೊಳ್ಳುತ್ತಾರೆ. ಆದರೆ, ಬಡವರು ಮತ್ತು ನಿರ್ಗತಿಕರು ನ್ಯಾಯಾಲಯಕ್ಕೆ ಅಲೆದು ಅಲೆದು ಬೇಸತ್ತುಹೋಗುತ್ತಿರುವುದು ವಿಪರ್ಯಾಸದ ಸಂಗತಿಯಾಗಿದೆ. ಆದ್ದರಿಂದ ಸುಪ್ರೀಂ ಕೋರ್ಟ್, ಹೈಕೋರ್ಟ್ ಮತ್ತು ಜಿಲ್ಲಾ, ತಾಲೂಕಾ ನ್ಯಾಯಾಲಯಗಳ ನ್ಯಾಯಾಧೀಶರು ಮತ್ತು ವಕೀಲರು ಬಾಕಿಯಿರುವ ಪ್ರಕರಣಗಳನ್ನು ಸರಿಯಾದ ರೀತಿಯಲ್ಲಿ ವಿಚಾರಣೆ ಮಾಡುವುದರೊಂದಿಗೆ ಎಲ್ಲರಿಗೂ ತ್ವರಿತ ಮತ್ತು ಸೂಕ್ತ ಸಮಯದಲ್ಲಿ ನ್ಯಾಯ ದಾನ ಮಾಡುವ ಬಗ್ಗೆ ಚಿಂತನೆ ನಡೆಸಬೇಕಾಗಿದೆ.
>
> – ಎಚ್.ಕೆ. ಪಾಟೀಲ.
> ಕಾನೂನು ಸಚಿವರು.

ಅಲ್ಲದೆ, ಅಣುಕು ನ್ಯಾಯಾಲಯಗಳಂತಹ ಸ್ಪರ್ಧೆಗಳಲ್ಲಿ ಬಡವರಿಗೆ ತ್ವರಿತ ನ್ಯಾಯ ದಾನವಾಗುವ ರೀತಿಯಲ್ಲಿ ಚಿಂತನೆ ಮತ್ತು ಚರ್ಚೆಗಳು ನಡೆದು, ಕಾನೂನು ವಿದ್ಯಾರ್ಥಿಗಳ ಬೌದ್ಧಿಕ ಸಾಮರ್ಥ್ಯವನ್ನು ಹೆಚ್ಚಿಸುವ ಪ್ರಯತ್ನಕ್ಕೆ ಕಾನೂನು ವಿದ್ಯಾಯಲಗಳು ಶ್ರಮಿಸಬೇಕು ಎಂದು ಸಂಸದೀಯ ವ್ಯವಹಾರ, ಕಾನೂನು ಹಾಗೂ ಪ್ರವಾಸೋದ್ಯಮ ಸಚಿವ ಡಾ. ಎಚ್.ಕೆ. ಪಾಟೀಲ ಹೇಳಿದರು. ಹುಬ್ಬಳ್ಳಿಯ ಕೆ.ಎಲ್.ಇ ಸಂಸ್ಥೆಯ ಬಿ.ವಿ. ಬೆಲ್ಲದ ಕಾನೂನು ಮಹಾವಿದ್ಯಾಲಯದಲ್ಲಿ ಶನಿವಾರ ಗದಗ ನಗರದ ಕೆ.ಎಲ್.ಇ ಸಂಸ್ಥೆಯ ಎಸ್.ಎ ಮಾನ್ವಿ ಕಾನೂನು ಮಹಾವಿದ್ಯಾಲಯ ಹಾಗೂ ಕೆ.ಎಲ್.ಇ ಲಾ ಆಕಾಡಮಿ ವತಿಯಿಂದ ಆಯೋಜಿದ್ದ ರಾಷ್ಟ್ರಮಟ್ಟದ ಅಣುಕು ನ್ಯಾಯಾಲಯ ಸ್ಪರ್ಧೆಯಲ್ಲಿ ವಿಜೇತ ತಂಡಗಳಿಗೆ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಅವರು ಮಾತನಾಡಿದರು.

ಭಾಷೆಯ ಮೇಲೆ ಸಾಮರ್ಥ್ಯವಿದ್ದಾಗ ಮಾತ್ರ ಒಂದು ಪ್ರಕರಣವನ್ನು ಗೆಲ್ಲಲು ಸಾಧ್ಯವಾಗುತ್ತದೆ. ಸಂವಿಧಾನದ ವಿಧಿ 22ರಲ್ಲಿ ವಕೀಲ ವೃತ್ತಿಗೆ ಹೆಚ್ಚಿನ ಆದ್ಯತೆ ನೀಡಲಾಗಿದೆ. ಅದನ್ನು ಚೆನ್ನಾಗಿ ಅಭ್ಯಾಸ ಮಾಡುವ ಮೂಲಕ ಕಕ್ಷಿದಾರರಿಗೆ ನ್ಯಾಯ ಒದಗಿಸುವುದು ನಿಮ್ಮ ಕರ್ತವ್ಯವಾಗಿದೆ. ವಕೀಲರು ಕಾನೂನು ಅಧ್ಯಯನ ಮಾಡುವುದರ ಜತೆಗೆ ನೈತಿಕ ಮೌಲ್ಯವನ್ನು ಹೆಚ್ಚಿಸಿಕೊಳ್ಳುವುದು ಕೂಡ ಮುಖ್ಯವಾಗಿದೆ ಎಂದರು.

ಸುಪ್ರೀಂ ಕೋರ್ಟ್ ನ್ಯಾಯಾಧೀಶ ಅಭಯ್ ಶ್ರೀನಿವಾಸ ಓಕ್ ಮಾತನಾಡಿ, ಅಣುಕು ನ್ಯಾಯಾಲಯಗಳಿಂದ ಕಾನೂನು ವಿದ್ಯಾರ್ಥಿಗಳಲ್ಲಿ ವಾದ ಮಂಡನೆ ಮಾಡುವ ಸಾಮರ್ಥ್ಯ ಹೆಚ್ಚಾಗುತ್ತದೆ. ಅಣುಕು ನ್ಯಾಯಾಲಯಗಳು ವಿದ್ಯಾರ್ಥಿಗಳ ವ್ಯಕ್ತಿತ್ವವನ್ನು ಮತ್ತು ವೃತ್ತಿ ಕೌಶಲ್ಯವನ್ನು ಹೆಚ್ಚಿಸುವ ಸ್ಪರ್ಧೆಯಾಗಿದೆ.

▸▸ 3ನೇ ಪುಟಕ್ಕೆ

## ಸಂಪಾದಕೀಯ

# ರೈತರ ಮೇಲೆ ಬಲಪ್ರಯೋಗ

ಹರಿಯಾಣಾದಲ್ಲಿ ರೈತರು ಮತ್ತೊಮ್ಮೆ ಕೇಂದ್ರ ಸರಕಾರದ ವಿರುದ್ಧ ಸಿಡಿದೆದ್ದಿದ್ದಾರೆ. ಕನಿಷ್ಠ ಬೆಂಬಲ ಬೆಲೆಗೆ ಕಾನೂನು ಖಾತರಿ ನೀಡುವುದು ಸೇರಿದಂತೆ ವಿವಿಧ ಬೇಡಿಕೆ ಈಡೇರಿಕೆಗೆ ಒತ್ತಾಯಿಸಿ ಸಂಯುಕ್ತ ಕಿಸಾನ್ ಮೋರ್ಚಾ ಹಾಗೂ ಇನ್ನು ಅನೇಕ ರೈತ ಸಂಘಟನೆಗಳು ನಿರಂತರ ಪ್ರತಿಭಟನೆ ನಡೆಸುತ್ತಿವೆ. ಹೋರಾಟದ ಭಾಗವಾಗಿ ದೆಹಲಿಗೆ ಪಾದಯಾತ್ರೆ ಆರಂಭಿಸಿದ್ದ ರೈತರ ಮೇಲೆ ಪೊಲೀಸರು ಅಶ್ರುವಾಯು, ಸೆಲ್ ಸಿಡಿಸಿದ್ದಾರೆ.

ಕೇವಲ 100 ಜನ ರೈತರು ಪಾದಯಾತ್ರೆ ಆರಂಭಿಸಿದ್ದರು. ಅದರಲ್ಲಿ 10ಕ್ಕೂ ಹೆಚ್ಚು ರೈತರು ಗಾಯಗೊಂಡಿದ್ದಾರೆ. ಕೇಂದ್ರ ಸರಕಾರ ಕೆಲ ವರ್ಷಗಳಲ್ಲಿ ಹೀಗೆ ರೈತರ ಮೇಲೆ ಪದೇ ಪದೇ ಬಲಪ್ರಯೋಗ ಮಾಡುವುದು ಮಾತ್ರ ನಿಂತಿಲ್ಲ. ರೈತರ ಹೋರಾಟವೂ ಅಷ್ಟೆ ಅಚಲವಾಗಿ ಮುನ್ನಡೆಯುತ್ತಿದೆ. ಅನ್ನದಾತನಿಗೆ ನ್ಯಾಯ ಸಿಗುವ ವರೆಗೂ ವಿರಮಿಸುವ ಲಕ್ಷಣಗಳು ಕಾಣುತ್ತಿಲ್ಲ.

ಆದರೆ ನರೇಂದ್ರ ಮೋದಿ ನೇತೃತ್ವದ ಎನ್ ಡಿಎ ಸರಕಾರ ರೈತರ ಮೇಲೆ ಬಲಪ್ರಯೋಗ ಮಾಡುವುದು ಎಷ್ಟು ಸರಿ. ಕೇವಲ 100 ರೈತರ ಪಾದಯಾತ್ರೆಯನ್ನು ನಿರ್ವಹಣೆ ಮಾಡಲು ಸಾಧ್ಯವಾಗದಷ್ಟು ಕೇಂದ್ರ ಸರಕಾರ, ಸುರಕ್ಷಾ ಬಲಗಳು ದುರ್ಬಲವಾದವೆ ಎನ್ನುವ ಪ್ರಶ್ನೆಗಳು ಮೂಡುತ್ತವೆ.

ಸಂವಿಧಾನ ನಮಗೆ ಪ್ರತಿಭಟಿಸುವ ಹಕ್ಕು ನೀಡಿದೆ. ಶಾಂತಿಯುತ ಹೋರಾಟಕ್ಕೆ ಯಾವುದೇ ಅಡೆತಡೆಯ ಅಗತ್ಯವೂ ಇಲ್ಲ. ಇಂಥ ಕನಿಷ್ಠ ಪ್ರಜ್ಞೆ ಇರದ ಕೇಂದ್ರ ಸರಕಾರ, ಪಾದಯಾತ್ರೆ ಆರಂಭವಾಗುತ್ತಿದ್ದಂತೆ ರೈತರ ಮೇಲೆ ಅಶ್ರುವಾಯು ಪ್ರಯೋಗಿಸಿದ್ದು ಸರಿಯಲ್ಲ. ಕನಿಷ್ಠ 1 ಕಿ.ಮೀ. ನಡೆಯುವುದಕ್ಕೂ ಅವಕಾಶ ಇಲ್ಲದಂತೆ ರಸ್ತೆಗಳನ್ನು ಬಂದ್ ಮಾಡಿ ರೈತರನ್ನು ಮುಂದಕ್ಕೆ ಹೋಗದಂತೆ ನಿರ್ಬಂಧ ವಿಧಿಸಿದ್ದು, ಸರ್ವಾಧಿಕಾರಿ ಧೋರಣೆಯನ್ನು ತೋರಿಸುತ್ತದೆ.

ಇನ್ನು ಲೋಕಸಭೆಯಲ್ಲೂ ಕೃಷಿ ಸಚಿವರು ಕಾಂಗ್ರೆಸ್ ವಿರುದ್ಧ ಹರಿಹಾಯುವುದರಲ್ಲಿಯೇ ಕಾಲ ಕಳೆಯುತ್ತಿದ್ದಾರೆ. ಎನ್ ಡಿಎ ಸರಕಾರ ಕನಿಷ್ಠ ಬೆಂಬಲ ಬೆಲೆಯಲ್ಲಿಯೇ ರೈತರ ಉತ್ಪನ್ನ ಖರೀದಿಗೆ ಕ್ರಮ ಕೈಗೊಂಡಿದೆ. ದೇಶದಲ್ಲಿ ಸುದೀರ್ಘ ಅವಧಿಗೆ ಆಳ್ವಿಕೆ ನಡೆಸಿದ ಕಾಂಗ್ರೆಸ್ ಯಾವತ್ತೂ ರೈತರ ಹಿತ ಕಾಪಾಡಿಲ್ಲ ಎನ್ನುತ್ತಾರೆ. ಆದರೆ ಎನ್ ಡಿಎ ಸರಕಾರ ರೈತರ ಹಿತ ಕಾಪಾಡಲಿದೆ ಎನ್ನುತ್ತಾರೆ. ಹತ್ತಾರು ರೈತರ ಹಿತ ಕಾಪಾಡದ ಕೇಂದ್ರ ಸರಕಾರ, ದೇಶದ ರೈತರ ಹಿತ ಕಾಪಾಡುತ್ತಾರೆ ಎಂದು ನಂಬುವುದು ಹೇಗೆ ಎನ್ನುವಂತಾಗಿದೆ.

## ಶ್ರೀ ಆಂಜನೇಯ ಸ್ವಾಮಿ ದೀಪೋತ್ಸವ ಇಂದು

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ತಾಲೂಕಿನ ಬಾಳೆಹೊಸೂರು ಗ್ರಾಮದ ಆರಾಧ್ಯ ದೈವವಾಗಿರುವ ಶ್ರೀ ಆಂಜನೇಯ ಸ್ವಾಮಿ ದೇವಸ್ಥಾನದಲ್ಲಿ ಕಾರ್ತಿಕ ದೀಪೋತ್ಸವ ಕಾರ್ಯಕ್ರಮವು ಡಿ.7ರಂದು ಸಂಜೆ 6 ಗಂಟೆಗೆ ನಡೆಯಲಿದೆ.

ಈ ಭಾಗದ ಶ್ರದ್ಧಾ ಮತ್ತು ಭಕ್ತಿ ಕೇಂದ್ರವಾಗಿರುವ, ಬೇಡಿದ ಇಷ್ಟಾರ್ಥಗಳನ್ನು ಈಡೇರಿಸುವ ಆಂಜನೇಯ ಸ್ವಾಮಿ ದೇಗುಲದಲ್ಲಿ ನಡೆಯುವ ದೀಪೋತ್ಸವ ಕಾರ್ಯಕ್ರಮದ ಅಂಗವಾಗಿ ಶನಿವಾರ ಮುಂಜಾನೆ ಅಭಿಷೇಕ, ಸಹಸ್ರ ಪುಷ್ಪಾರ್ಚನೆ, ಕುಂಕುಮ ಅಲಂಕಾರ, ಎಲೆ ಪೂಜೆ ಅಲಂಕಾರಗಳು ನಡೆಯಲಿವೆ. ಸಂಜೆ 6 ಗಂಟೆಗೆ ನಡೆಯುವ ಸಹಸ್ರ ದೀಪೋತ್ಸವ ಕಾರ್ಯಕ್ರಮವನ್ನು ಶ್ರೀ ಫಕೀರ ದಿಂಗಾಲೇಶ್ವರ ಮಹಾಸ್ವಾಮಿಗಳು ಉದ್ಘಾಟಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ತಾಲೂಕಿನ ಮುಖಂಡರು, ಗ್ರಾಮಸ್ಥರು ಉಪಸ್ಥಿತರಿರಲಿದ್ದಾರೆ ಎಂದು ಸಂಘಟಕರು ತಿಳಿಸಿದ್ದಾರೆ.

## ಸುಗಮ ಅಧಿವೇಶನಕ್ಕೆ ಸಕಲ ಸಿದ್ಧತೆ: 10 ಸಮಿತಿ ರಚನೆ

**■ವಿಜಯಸಾಕ್ಷಿ ಸುದ್ದಿ, ಬೆಳಗಾವಿ**

ಬೆಳಗಾವಿ ಚಳಿಗಾಲ ಅಧಿವೇಶನ 2024 ಸುಗಮವಾಗಿ ನಡೆಸಲು ವಸತಿ, ಸಾರಿಗೆ, ಉಟೋಪಹಾರ ಸೇರಿದಂತೆ ಎಲ್ಲಾ ಅಗತ್ಯ ಸಿದ್ಧತೆಗಳನ್ನು ಜಿಲ್ಲಾಡಳಿತದಿಂದ ಮಾಡಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್ ಅವರು ಶುಕ್ರವಾರ ಮಾಹಿತಿ ನೀಡಿದ್ದಾರೆ.

ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸುಗಮ ಅಧಿವೇಶನಕ್ಕಾಗಿ ಈಗಾಗಲೇ 10 ಸಮಿತಿಗಳನ್ನು ರಚಿಸಲಾಗಿದೆ. ಶಾಸಕರು, ಸಚಿವರು, ಅಧಿಕಾರಿಗಳು ಸಿಬ್ಬಂದಿ ವಸತಿಗಾಗಿ ಖಾಸಗಿ ಹೋಟೆಲ್, ಅತಿಥಿ ಗೃಹ, ಪ್ರವಾಸಿ ಮಂದಿರಗಳಲ್ಲಿ ಒಟ್ಟಾರೆ 2,756 ಕೊಠಡಿಗಳನ್ನು ಕಾಯ್ದಿರಿಸಲಾಗಿದೆ ಎಂದು ಹೇಳಿದರು.

ಸಾರಿಗೆ ಅಗತ್ಯಗಳಿಗಾಗಿ ವಿವಿಧ ಜಿಲ್ಲೆಗಳಿಂದ ವಿವಿಧ ವಾಹನಗಳ ವ್ಯವಸ್ಥೆ ಮಾಡಲಾಗಿದ್ದು, ಡಿಟಿಐ, ಸ್ಪೋರ್ಟ್ಸ್ ಹಾಸ್ಟೆಲ್ ಮತ್ತು ಅಂಬೇಡ್ಕರ್ ಭವನದಲ್ಲಿ ಚಾಲಕರಿಗೆ ವಸತಿ ವ್ಯವಸ್ಥೆ ಮಾಡಲಾಗಿದೆ.

## ಅರ್ಜಿ ಆಹ್ವಾನ

**■ವಿಜಯಸಾಕ್ಷಿ ಸುದ್ದಿ, ಗದಗ**

ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖಾ ವತಿಯಿಂದ 2024–25ನೇ ಸಾಲಿನಲ್ಲಿ ಗ್ರಾಮೀಣ ರೈತ ಮಹಿಳೆಯರಿಗೆ ನಾಟಿ ಕೋಳಿ ಮರಿಗಳನ್ನು ವಿತರಿಸಲು ಅರ್ಹ ಫಲಾನುಭವಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಈ ಯೋಜನೆಯಡಿ ಜಿಲ್ಲೆಗೆ 217 (ಪರಿಶಿಷ್ಠ.ಪಂಗಡ–18, ಪರಿಶಿಷ್ಠ.ಜಾತಿ–170, ಸಾಮಾನ್ಯ–29) ಗುರಿ ನಿಗದಿಯಾಗಿದ್ದು, ಆಯ್ಕೆಯಾಗುವ ಪ್ರತಿ ಫಲಾನುಭವಿಗೆ 5 ವಾರದ 20 ನಾಟಿ ಕೋಳಿ ಮರಿಗಳನ್ನು ಉಚಿತವಾಗಿ ವಿತರಣೆ ಮಾಡಲಾಗುವುದು. ಈ ಯೋಜನೆಯಡಿ ಬಡತನ ರೇಖೆಗಿಂತ ಕೆಳಗಿರುವ ರೈತ ಮಹಿಳೆಯರಿಗೆ/ಸ್ವ ಸಹಾಯ ಗುಂಪಿನ ಮಹಿಳಾ ಸದಸ್ಯರಿಗೆ/ಪ್ರಾಥಮಿಕ ಕೋಳಿ ಸಹಕಾರ ಸಂಘಗಳಲ್ಲಿರುವ ಮಹಿಳಾ ಸದಸ್ಯರಿಗೆ/ರೈತ ಉತ್ಪಾದಕ ಸಂಸ್ಥೆಯ ಮಹಿಳಾ ಸದಸ್ಯರಿಗೆ ಆದ್ಯತೆ ನೀಡಿ ಫಲಾನುಭವಿಗಳನ್ನು ಆಯ್ಕೆ ಮಾಡಲಾಗುವುದು.

ಅರ್ಜಿ ಸಲ್ಲಿಸಲು ಡಿಸೆಂಬರ್ 23 ಕೊನೆಯ ದಿನವಾಗಿದ್ದು, ಅರ್ಜಿಗಳಿಗಾಗಿ ಮತ್ತು ಹೆಚ್ಚಿನ ಮಾಹಿತಿಗಾಗಿ ತಾಲ್ಲೂಕಿನ ಮುಖ್ಯ ಪಶು ವೈದ್ಯಾಧಿಕಾರಿಗಳು (ಆಡಳಿತ) ಪಶು ಆಸ್ಪತ್ರೆ :ಗದಗ/ ಮುಂಡರಗಿ/ನರಗುಂದ/ ರೋಣ/ ಗಜೇಂದ್ರಗಡ/ಶಿರಹಟ್ಟಿ/ಲಕ್ಷ್ಮೇಶ್ವರ ಕಚೇರಿಗಳಿಗೆ ಸಂಪರ್ಕಿಸಲು ಮತ್ತು ಯೋಜನೆಯ ಸದುಪಯೋಗ ಪಡೆದುಕೊಳ್ಳಬಹುದಾಗಿದೆ.

**ಬೆಳ್ಳಟ್ಟಿ ಶ್ರೀ ರಾಮಲಿಂಗೇಶ್ವರ ದಾಸೋಹಮಠದ ಕಾರ್ತಿಕೋತ್ಸವದಲ್ಲಿ ಹಾವೇರಿ ಡಿ.ಸಿ ಡಾ. ವಿಜಯಮಹಾಂತೇಶ ದಾನಮ್ಮನವರ**

# ವಿವಿಧತೆಯಲ್ಲಿ ಏಕತೆ ಕಾಣುವುದು ನಮ್ಮ ಸಂಸ್ಕೃತಿ

**■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಪುರಾತನ ಕಾಲದಿಂದಲೂ ಮೌಲ್ಯಾಧಾರಿತ ಕುಟುಂಬ ಪದ್ಧತಿ ನಮ್ಮ ದೇಶದಲ್ಲಿ ಆಚರಣೆಯಲ್ಲಿದ್ದು, ಹಬ್ಬ ಹರಿದಿನಗಳಲ್ಲಿ ಎಲ್ಲರೂ ಜಾತಿ–ಮತ–ಪಂಥ–ಬೇಧ ಮರೆತು ಒಗ್ಗಟ್ಟಾಗಿ ವಿವಿಧತೆಯಲ್ಲಿ ಏಕತೆಯನ್ನು ಕಾಣುವುದು ನಮ್ಮ ಸಂಸ್ಕೃತಿಯಾಗಿದೆ. ಹೀಗಾಗಿ ನಾವು ಧರ್ಮವನ್ನು ರಕ್ಷಿಸಿದರೆ ಅದು ನಮ್ಮನ್ನು ರಕ್ಷಿಸುತ್ತದೆ ಎಂದು ಹಾವೇರಿ ಜಿಲ್ಲಾಧಿಕಾರಿ ಡಾ. ವಿಜಯಮಹಾಂತೇಶ ದಾನಮ್ಮನವರ ಹೇಳಿದರು.

ಅವರು ಶುಕ್ರವಾರ ರಾತ್ರಿ ಶಿರಹಟ್ಟಿ ತಾಲೂಕಿನ ಬೆಳ್ಳಟ್ಟಿ ಗ್ರಾಮದ ಶ್ರೀ ರಾಮಲಿಂಗೇಶ್ವರ ದಾಸೋಹಮಠದಲ್ಲಿ ಜರುಗಿದ ಕಾರ್ತಿಕೋತ್ಸವ ಪ್ರಯುಕ್ತ ಶ್ರೀಗಳಿಂದ ದಾಸೋಹಿ ಪ್ರಶಸ್ತಿ ಸ್ವೀಕರಿಸಿ ಮಾತನಾಡಿದರು.

ನಾನು ಕೂಡಾ ಗ್ರಾಮೀಣ ಭಾಗದ ಬಡ ಕುಟುಂಬದ, ಕೃಷಿ ಕುಟುಂಬದಲ್ಲಿಯೇ ಬೆಳೆದು ಕನ್ನಡ ಶಾಲೆಯಲ್ಲಿ ಓದಿದವನು. ನನ್ನ ತಂದೆ–ತಾಯಿ ಮಾಡಿದಂತಹ ಧರ್ಮದ ಕಾರ್ಯಗಳು ನನಗೆ ಆಶೀರ್ವಾದವಾಗಿವೆ. ಹೀಗಾಗಿ ಶರಣರ ನಾಡು ಬಿಜಾಪೂರ ಜಿಲ್ಲೆಯಲ್ಲಿ ಹಾಗೂ ಸಂತರ ನಾಡು ಹಾವೇರಿಯಲ್ಲಿ ಕೆಲಸ ಮಾಡುವ ಸದಾವಕಾಶ ದೊರೆತಿದೆ. ದೇಶವು ಅಭಿವೃದ್ಧಿ ಪಥದತ್ತ ಸಾಗುತ್ತಿದ್ದು, ಯುವಕರು ದೇಶದ ಆಸ್ತಿಗಳಾಗಬೇಕು ಎಂದರು.



ಸಾನ್ನಿಧ್ಯ ವಹಿಸಿದ್ದ ರಾಮಲಿಂಗೇಶ್ವರ ದಾಸೋಹಮಠದ ಬಸವರಾಜ ಸ್ವಾಮೀಜಿ ಮಾತನಾಡಿ, ಮಠ–ಮಾನ್ಯಗಳು ಭಕ್ತರಿಗೆ ಸೇರಿದ್ದು, 84 ಲಕ್ಷ ಜೀವರಾಶಿಗಳಿಗೆ ಬೇಕಾದಂತಹ ದಾಸೋಹಿ ಶಬ್ದವು ವಿಶ್ವಮಾನ್ಯವಾಗಿದೆ. ಎಲ್ಲ ಜಾತಿ–ಜನಾಂಗಕ್ಕೂ ಬೇಕಾದಂತಹ ಶಬ್ದವಾಗಿದೆ. ಸಮಾಜದ ಋಣ ತೀರಿಸುವಂತವರನ್ನು ಗುರುತಿಸಿ ಶ್ರೀಮಠದ ವತಿಯಿಂದ ದಾಸೋಹಿ ಪ್ರಶಸ್ತಿಯನ್ನು ನೀಡಲಾಗುತ್ತಿದೆ. ಶ್ರೀ ಮಠದಲ್ಲಿ ಜರುಗಿದ ಕರ್ಪೂರ ಕಾರ್ತಿಕೋತ್ಸವವು ಸರಳತೆಯ ಸಂಕೇತವಾಗಿದ್ದು, ಯಾವುದೇ ಆಡಂಬರವಿಲ್ಲದೇ, ಭಕ್ತರೇ ಅಲಂಕಾರ, ದಾಸೋಹವೇ ಅಲಂಕಾರ ಎಂದು ಅರ್ಥೈಸುವ ನಿಟ್ಟಿನಲ್ಲಿ ಕಾರ್ಯಕ್ರಮದಲ್ಲಿ ಸಾವಿರಾರು ಭಕ್ತರು ಪಾಲ್ಗೊಂಡು ತಮ್ಮ ಭಕ್ತಿಯನ್ನು ಸಮರ್ಪಿಸಿದ್ದಾರೆ. ಕಾರ್ತಿಕೋತ್ಸವವು ಎಲ್ಲರ ಬಾಳಲ್ಲಿ ಕಷ್ಟ–ಕಾರ್ಪಣ್ಯಗಳನ್ನು ದೂರವಾಗಿಸಿ ಸುಜ್ಞಾನದ ಬೆಳಕು ಪಸರಿಸಲಿ ಎಂದು ಹಾರೈಸಿದರು.

ಪ್ರತಿಯೊಬ್ಬರೂ ಗುಣಮಟ್ಟದ ಶಿಕ್ಷಣವನ್ನು ಹೊಂದಬೇಕು. ಸರಕಾರ ಎಲ್ಲ ಸೌಲಭ್ಯಗಳನ್ನು ನೀಡುತ್ತಿದ್ದು, ಇದನ್ನು ನೀವೆಲ್ಲರೂ ಸದುಪಯೋಗಪಡಿಸಿಕೊಳ್ಳಬೇಕು. ಸತತ ಪ್ರಯತ್ನದಿಂದ ಕಷ್ಟಪಟ್ಟು ಜೀವನದಲ್ಲಿ ಮುಂದೆ ಬರಬೇಕು. ಸರಕಾರದ ಅನುದಾನವಿಲ್ಲದೇ, ಸ್ವಂತ ಪರಿಶ್ರಮದಿಂದ ಬೆಳ್ಳಟ್ಟಿಯಲ್ಲಿ ಅದ್ಭುತ ಮಠವನ್ನು ಬಸವರಾಜ ಶ್ರೀಗಳು ಸ್ಥಾಪನೆ ಮಾಡಿದ್ದಾರೆ. ಅವರ ಕೆಲಸ ಪೂಜ್ಯನೀಯವಾಗಿದೆ ಎಂದು ಡಾ. ವಿಜಯಮಹಾಂತೇಶ ದಾನಮ್ಮನವರ ಹೇಳಿದರು.

ನಂತರ ಬಸವರಾಜ ಶ್ರೀಗಳಿಗೆ ಸಂಸ್ಕೃತ ಪಾಠ ಕಲಿಸಿದ ಧಾರವಾಡದ ವೀರೇಶ ಬ್ಯಾಹಟ್ಟಿ, ಗದಗದ ನಿವೃತ್ತ ಸಂಸ್ಕೃತ ಶಿಕ್ಷಕರಾದ ಎನ್.ಎಸ್. ಭಟ್ಟ, ಶಿವಮೂರ್ತೆಪ್ಪ ಶಿಂಪಗೇರ, ಗಣಪತಿ ಗಾಂವಕರ, ಪಂಚಯ್ಯ ಹಿರೇಮಠ, ಶಿವಚಲಕುಮಾರ ಸಾಲಿಮಠ ಇವರುಗಳನ್ನು ಸನ್ಮಾನಿಸಲಾಯಿತು.

ರೋಣ ಪಿಎಸ್‌ಐ ಪ್ರಕಾಶ ಬಣಕಾರ ಇವರಿಗೆ ದಾಸೋಹಿ ಪ್ರಶಸ್ತಿ ನೀಡಲಾಯಿತು.

ಅಗಡಿ–ಗುತ್ತಲದ ಗುರುಸಿದ್ದ ಸ್ವಾಮೀಜಿ ಹಾಗೂ ಸುತ್ತಮುತ್ತಲಿನ ಗ್ರಾಮಗಳ ಭಕ್ತರು ಉಪಸ್ಥಿತರಿದ್ದರು.

# ಸ್ತ್ರೀಶಕ್ತಿ ಭವನ ನಿರ್ಮಾಣಕ್ಕೆ ಚಾಲನೆ

**■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಶನಿವಾರ ಶಿರಹಟ್ಟಿಯಲ್ಲಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ವತಿಯಿಂದ 25 ಲಕ್ಷ ರೂ ವೆಚ್ಚದಲ್ಲಿ ಸ್ತ್ರೀಶಕ್ತಿ ಭವನ ನಿರ್ಮಾಣಕ್ಕೆ ಶಾಸಕ ಡಾ. ಚಂದ್ರು ಲಮಾಣಿ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಶಿರಹಟ್ಟಿ ಬಿಜೆಪಿ ನಗರ ಘಟಕದ ಅಧ್ಯಕ್ಷ ನಾಗರಾಜ ಲಕ್ಕುಂಡಿ, ಪಟ್ಟಣದಲ್ಲಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಅಭಿವೃದ್ಧಿ ಇಲಾಖೆ ವತಿಯಿಂದ ಬಹಳ ವರ್ಷಗಳ ಹಿಂದೆಯೇ ಸ್ತ್ರೀಶಕ್ತಿ ಭವನ ಮಂಜೂರಾಗಿತ್ತು. ಅದಕ್ಕೆ ಸೂಕ್ತವಾದ ನಿವೇಶನದ ಕೊರತೆಯಿತ್ತು. ಈ ಬಗ್ಗೆ ಶಾಸಕ ಡಾ. ಚಂದ್ರು ಲಮಾಣಿ ಅವರ ಗಮನಕ್ಕೆ ತರಲಾಗಿತ್ತು. ಅವರ ಇಚ್ಛಾಶಕ್ತಿಯಿಂದ ಇಂದು



ಭವನ ನಿರ್ಮಾಣಕ್ಕೆ ಚಾಲನೆ ನೀಡಲಾಗುತ್ತಿದೆ. ಮುಂಬರುವ ದಿನಗಳಲ್ಲಿ ಇಲ್ಲಿ ಮಹಿಳೆಯರಿಗೆ ಸಭೆ–ಸಮಾರಂಭ ನಡೆಸಲು ಮುಕ್ತ ಅವಕಾಶ ದೊರೆಯಲಿದೆ ಎಂದರು.

ಈ ಸಂದರ್ಭದಲ್ಲಿ ಪ.ಪಂ ಉಪಾಧ್ಯಕ್ಷೆ ನೀಲಮ್ಮ ಹುಬ್ಬಳ್ಳಿ, ಸ್ಥಾಯಿ ಸಮಿತಿ ಅಧ್ಯಕ್ಷ ಹೊನ್ನಪ್ಪ ಶಿರಹಟ್ಟಿ, ಸದಸ್ಯರಾದ ಪರಮೇಶ ಪರಬ, ಸಂದೀಪ ಕಪ್ಪತ್ತನವರ, ಮಹಾದೇವ ಗಾಣಗೇರ, ಅಶೋಕ ವರವಿ, ಜಾನು ಲಮಾಣಿ, ಗೂಳಪ್ಪ ಕರಿಗಾರ, ರಾಮಣ್ಣ ಕಂಬಳಿ, ಬಿಜೆಪಿ ಮಹಿಳಾ ತಾಲೂಕಾಧ್ಯಕ್ಷೆ ನಂದಾ ಪಲ್ಲೇದ, ಪರಶುರಾಮ ಡೊಂಕಬಳ್ಳಿ, ಅಕ್ಬರಸಾಬ ಯಾದಗಿರಿ, ಸಿ.ಪಿ. ಕಾಳಗಿ, ಮುಖ್ಯಾಧಿಕಾರಿ ಸಿದ್ದರಾಯ ಕಟ್ಟಿಮನಿ, ಸಿಡಿಪಿಓ ಮೃತ್ಯುಂಜಯ ಗುಡ್ಡದಾನ್ವೇರಿ, ಬಿಸಿಎಂನ ಮರಿಗೌಡ ಸುರಕೋಡ ಮುಂತಾದವರು ಉಪಸ್ಥಿತರಿದ್ದರು.

## ಅಲೆಮಾರಿ ಅಭಿವೃದ್ಧಿ ನಿಗಮದ ಅಧ್ಯಕ್ಷರ ಪ್ರವಾಸ

**■ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಶ್ರೀಮತಿ ಪಲ್ಲವಿ ಜಿ ಅವರು ಡಿಸೆಂಬರ್ 8 ಮತ್ತು 9 ರಂದು ಗದಗ ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳಲಿದ್ದು ಕಾರ್ಯಕ್ರಮದ ವಿವರ ಇಂತಿದೆ.

ಡಿಸೆಂಬರ್ 8 ರಂದು ಬೆಳಿಗ್ಗೆ 9 ಗಂಟೆಗೆ ಜಿಲ್ಲೆಯ ಮುಂಡರಗಿ ತಾಲೂಕು ಮೇವುಂಡಿ ಗ್ರಾಮದಲ್ಲಿ ಪರಿಶಿಷ್ಟ ಜಾತಿಯ ಅಲೆಮಾರಿ ಸಮುದಾಯದ ಬುಡ್ಗ ಜಂಗಮ್ ಸಮಾಜದ ಕುಟುಂಬಗಳು ವಾಸಿಸುತ್ತಿರುವ ಸ್ಥಳ ವೀಕ್ಷಣೆ ಮಾಡುವರು ಮತ್ತು ತಹಸೀಲ್ದಾರರು, ಪುರಸಭೆ ಮುಖ್ಯಾಧಿಕಾರಿಗಳು, ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿಗಳು ಹಾಗೂ ಇತರೆ ಅಧಿಕಾರಿಗಳೊಂದಿಗೆ ಕುಂದುಕೊರತೆಗಳ ಸಭೆ ಜರುಗಿಸುವರು.

ನಂತರ 10.30 ಗಂಟೆಗೆ ಮುಂಡರಗಿ ಪಟ್ಟಣ/ ತಾಲೂಕಿನಲ್ಲಿ ಕುಂಚಿ ಕೊರವ ಸಮಾಜ, ಮಧ್ಯಾಹ್ನ 1 ಗಂಟೆಗೆ ಮುಂಡರಗಿ ತಾಲೂಕು ಕೊರ್ಲಹಳ್ಳಿ ಗ್ರಾಮದಲ್ಲಿ ಶಿಳ್ಳೇಕ್ಯಾತ ಸಮಾಜ, ಮಧ್ಯಾಹ್ನ 3 ಗಂಟೆಗೆ ಗದಗ ತಾಲೂಕು ಶ್ರೀ ರಾಮನಗರ ಕಳಸಾಪುರ ರೋಡ್‌ದಲ್ಲಿ ಸುಡುಗಾಡುಸಿದ್ಧರ ಸಮಾಜ, ಸಂಜೆ 4.30 ಗಂಟೆಗೆ ಗದಗ ಬೆಟಗೇರಿಯ ಸೆಟ್ಲ್ ಮೆಂಟ್ ಗಾಂಧಿನಗರದಲ್ಲಿ ಹರಿಣಶಿಕಾರಿ ಜನಾಂಗ , ಗಂಟಿಚೋರ್ ಜನಾಂಗ, ಕೊರಮ ಜನಾಂಗ, ಕೊರಚ ಜನಾಂಗ , ಚೆನ್ನದಾಸರ ಜನಾಂಗದ ಕುಟುಂಬಗಳ ಸ್ಥಳ ವೀಕ್ಷಣೆ ಮಾಡುವರು ಹಾಗೂ ತಹಸೀಲ್ದಾರರು, ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿಗಳು, ಸ್ಥಳೀಯ ಸಂಸ್ಥೆಗಳ ಮುಖ್ಯಸ್ಥರು ಹಾಗೂ ಇತರೆ ಅಧಿಕಾರಿಗಳೊಂದಿಗೆ ಕುಂದುಕೊರತೆ ಸಭೆ ಜರುಗಿಸುವರು.

ಡಿಸೆಂಬರ್ 9 ರಂದು ಬೆಳಿಗ್ಗೆ 9 ಗಂಟೆಗೆ ಗದಗನ ಕಾಟನ್ ಸೇಲ್ ಸೊಸೈಟಿಯಲ್ಲಿ ಸ್ಥಳೀಯ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು.

ಬೆ 10.30 ಗಂಟೆಗೆ ಹುಬ್ಬಳ್ಳಿಯಲ್ಲಿ ಖಾಸಗಿ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು.

ಮಧ್ಯಾಹ್ನ 12.30 ಗಂಟೆಗೆ ಗದಗ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಅನುಷ್ಠಾನ ಸಮಿತಿಯ ಅಧ್ಯಕ್ಷರ ನೇತೃತ್ವದಲ್ಲಿ ಸಮಾಜ ಕಲ್ಯಾಣ ಇಲಾಖೆ ಅಧಿಕಾರಿಗಳು ಮತ್ತು ಜಿಲ್ಲಾ ಅನುಷ್ಠಾನ ಸಮಿತಿಯ ಸದಸ್ಯರೊಂದಿಗೆ ಜಂಟಿ ಸಭೆ ಹಾಗೂ ಪ್ರಗತಿ ಪರಿಶೀಲನೆ ಸಭೆ ನಡೆಸುವರು. ಮಧ್ಯಾಹ್ನ 1.30 ಗಂಟೆಗೆ ಗದಗ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಪತ್ರಿಕಾಗೋಷ್ಠಿ ನಡೆಸಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

## ಡಾ. ಅಂಬೇಡ್ಕರ್ ಪುತ್ಥಳಿಗೆ ಮಾಲಾರ್ಪಣೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಡಾ. ಬಾಬಾಸಾಹೇಬ್ ಅಂಬೇಡ್ಕರರ 68ನೇ ಮ'ಹಾಪ'ರಿನಿರ್ವಾಣ ದಿನದ ಅಂಗವಾಗಿ ಗದಗ ಜಿಲ್ಲಾ ಕಾಂಗ್ರೆಸ್ ಪರಿಶಿಷ್ಟ ಜಾತಿ ವಿಭಾಗದ ವತಿಯಿಂದ ನಗರಸಭೆಯ ಆವರಣದಲ್ಲಿರುವ ಡಾ. ಬಿ.ಆರ್. ಅಂಬೇಡ್ಕರ್ ಅವರ ಪುತ್ಥಳಿಗೆ ಶನಿವಾರ ಮಾಲಾರ್ಪಣೆ ಮಾಡಲಾಯಿತು.

ಕರ್ನಾಟಕ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕ ಜಿ.ಎಸ್. ಪಾಟೀಲ,



ಕೆಪಿಸಿಸಿ ಉಪಾಧ್ಯಕ್ಷರು, ಗದಗ ವಿಧಾನಸಭಾ ಮತಕ್ಷೇತ್ರದ ಮಾಜಿ ಶಾಸಕ ಡಿ.ಆರ್. ಪಾಟೀಲ ಅವರು ಮಾಲಾರ್ಪಣೆ ಮಾಡಿ ಗೌರವ ಸಮರ್ಪಿಸಿದರು.

ಗದಗ ಜಿಲ್ಲಾ ಪರಿಶಿಷ್ಟ ಜಾತಿ ಕಾಂಗ್ರೆಸ್ ವಿಭಾಗದ ಅಧ್ಯಕ್ಷ ಬಸವರಾಜ ಕಡೆಮನಿ, ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ, ಮಾರ್ತಾಂಡಪ್ಪ ಹಾದಿಮನಿ, ವಿನಾಯಕ ಬಳ್ಳಾರಿ, ವಿದ್ಯಾಧರ ದೊಡ್ಡಮನಿ, ಶಂಭು ಕಾಳೆ, ಶಿವು ಬಳ್ಳಾರಿ, ಉಮರ್‌ಫಾರೂಖ್ ಹುಬ್ಬಳ್ಳಿ, ಅನ್ವರ ಶಿರಹಟ್ಟಿ, ಮಹಮ್ಮದ್ ಶಾಲಗಾರ, ಶ್ರೀಕಾಂತ ಮಳಲಿ, ಎಚ್.ಕೆ. ಅಕ್ಕಿ, ಕೆ.ಎಚ್. ಬೆಲೂರ, ಬಾಲರಾಜ ಅರಬರ, ಶಾರುಖ್ ಹುಯಿಲಗೋಳ, ಅನಿಲ ಗರಗ, ಶಂಭು ಹುನಗುಂದ, ಮಹಮ್ಮದಸಾಬ್ ಬೆಟಗೇರಿ, ರಮೇಶ ರೋಣದ ಹಾಗೂ ಸೇರಿ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಇದ್ದರು.

**ಶ್ರೀಮದ್ರಂಭಾಪುರಿ ಶಾಖಾ ಗುರು ಮಠದಲ್ಲಿ ಜರುಗಿದ ಧರ್ಮ ಜಾಗೃತಿ ಸಮಾರಂಭದಲ್ಲಿ ರಂಭಾಪುರಿ ಶ್ರೀಗಳು**

# ಧರ್ಮದ ಅರಿವು ಎಂದಿಗೂ ಬರಿದಾಗದು

**■ವಿಜಯಸಾಕ್ಷಿ ಸುದ್ದಿ, ವಿಜಯಪುರ**

ಭೌತಿಕ ಬದುಕು ಸಮೃದ್ಧಿ ಹೊಂದಿದಷ್ಟರಷ್ಟೇ ಸಾಲದು. ಅದರೊಂದಿಗೆ ಆಂತರಿಕ ಬದುಕು ಸಮೃದ್ಧಿಯಾಗಬೇಕು. ಜೀವನದಲ್ಲಿ ಆದರ್ಶ ಗುರಿ ಮತ್ತು ಸಾಧನೆ ವ್ಯಕ್ತಿತ್ವ ವಿಕಾಸಕ್ಕೆ ಅವಶ್ಯಕವೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಶುಕ್ರವಾರ ತಾಲೂಕಿನ ಕನ್ನೂರು ಗ್ರಾಮದ ಶ್ರೀಮದ್ರಂಭಾಪುರಿ ಶಾಖಾ ಗುರು ಮಠದಲ್ಲಿ ಜರುಗಿದ ಧರ್ಮ ಜಾಗೃತಿ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಮನುಷ್ಯ ಜೀವನದಲ್ಲಿ ಕರ್ತವ್ಯ, ಶಿಸ್ತು, ಶ್ರದ್ಧೆ, ಛಲ ಮತ್ತು ಸಮರ್ಪಣಾ ಮನೋಭಾವನೆಗಳನ್ನು ಬೆಳೆಸಿಕೊಳ್ಳಬೇಕು. ನದಿಯ ನೀರನ್ನು ಎಷ್ಟು ತುಂಬಿದರೂ ಖಾಲಿ ಹೇಗೆ ಆಗುವುದಿಲ್ಲವೋ ಹಾಗೆಯೇ ಧರ್ಮದ ಅರಿವನ್ನು ಎಷ್ಟು ಅರಿತರೂ ಖಾಲಿಯಾಗುವುದಿಲ್ಲ. ಬಿತ್ತಿದ ಬೀಜದಂತೆ ಫಸಲು ಹೇಗೋ ಹಾಗೆಯೇ ನಮ್ಮ ಧರ್ಮಾಚರಣೆಯಂತೆ ಫಲ ಪ್ರಾಪ್ತಿ



ಉಂಟಾಗುತ್ತದೆ. ತಾಳ್ಮೆ ಮತ್ತು ಸಹನೆಯ ಗುಣ ಇಲ್ಲದಿರುವುದು ಇಂದಿನ ಅಶಾಂತಿ–ಅತೃಪ್ತಿಗಳಿಗೆ ಮೂಲ ಕಾರಣವೆಂದು ಶ್ರೀ ಜಗದ್ಗುರು ರೇಣುಕಾಚಾರ್ಯರು ಧರ್ಮ ಸೂತ್ರದಲ್ಲಿ ಬೋಧಿಸಿದ್ದಾರೆ. ಜೀವನದಲ್ಲಿ ಉನ್ನತಿ ಸಾಧಿಸಬೇಕಾದರೆ ಜನಬಲ, ಹಣಬಲ, ತೋಳ್ಬಲ ಇದ್ದರಷ್ಟೇ ಸಾಲದು. ಅದರೊಂದಿಗೆ ದೈವ ಬಲವು ಕೂಡಾ ಮುಖ್ಯವಾಗಿದೆ. ಕನ್ನೂರು ಗುರು ಮಠದ ಸೋಮನಾಥ ಶಿವಾಚಾರ್ಯ ಸ್ವಾಮಿಗಳು ಕ್ರಿಯಾಶೀಲ ಜೀವನವನ್ನು ಹೊಂದಿ ಶ್ರೀ ಮಠದ ಅಭಿವೃದ್ಧಿ ಹಾಗೂ ಭಕ್ತರಿಗೆ ಸನ್ಮಾರ್ಗ ದರ್ಶನ ತೋರುತ್ತಿರುವುದು ತಮಗೆ ಸಂತಸ ತಂದಿದೆ ಎಂದರು.

ಸಮಾರಂಭದ ಉದ್ಘಾಟನೆಯನ್ನು ಅಣ್ಣಪ್ಪ ಸಾಹುಕಾರ ನೆರವೇರಿಸಿ ಮಾತನಾಡಿ, ಬೆಳೆಯುವ ಯುವ ಜನಾಂಗದಲ್ಲಿ ಧರ್ಮನಿಷ್ಠೆ ಹಾಗೂ ರಾಷ್ಟ್ರಭಕ್ತಿ ಇರಬೇಕೆಂದರು. ಆಲಮೇಲ ಚಂದ್ರಶೇಖರ ಶ್ರೀಗಳು, ತಡವಲಗಾ ಅಭಿನವ ರಾಚೋಟೇಶ್ವರ ಶ್ರೀಗಳು, ಮಸ್ಕಿ ರುದ್ರಮುನಿ ಶ್ರೀಗಳು, ಗುಡ್ಡಾಪುರ ಗುರುಪಾದ ಶ್ರೀಗಳು, ಹಾವಿನಹಾಳ ವಿಜಯ ಮಹಾಂತೇಶ್ವರ ಶ್ರೀಗಳು, ತುರುವಿನಹಾಳ ಅಮರಗುಂಡ ಶ್ರೀಗಳು ಪಾಲ್ಗೊಂಡು ನುಡಿ ನಮನ ಸಲ್ಲಿಸಿದರು.

ಜೇರಟಗಿ ಮಡಿವಾಳ ಶಾಸ್ತ್ರಿಗಳು ಕಲಬುರ್ಗಿ ಶರಣ ಬಸವೇಶ್ವರ ಪುರಾಣವನ್ನು ಮಂಗಲಗೊಳಿಸಿದರು.

ನೇತೃತ್ವ ವಹಿಸಿದ ಸೋಮನಾಥ ಶಿವಾಚಾರ್ಯರು ಮಾತನಾಡಿ, ನಮಗೆ ಬಹಳಷ್ಟು ಶಕ್ತಿಯಿದೆ ಎಂದು ಭ್ರಮಿಸಿ ಗಾಳಿಯನ್ನು ಗುದ್ದಿದರೆ ಮೈ ನೋವಾಗುತ್ತದೆಯೇ ಹೊರತು ಅದರಿಂದ ಯಾವುದೇ ಪ್ರಯೋಜನವಾಗುವುದಿಲ್ಲ. ವ್ಯಕ್ತಿ ಜೀವನದಲ್ಲಿ ಸುವರ್ಣ ಸಂಪಾದಿಸದಿದ್ದರೂ ಪರವಾಗಿಲ್ಲ. ಆದರೆ ಸದ್ಗುಣಗಳನ್ನು ಸಂಪಾದಿಸಿಕೊಂಡು ಬಾಳಬೇಕು. ಶ್ರೀ ರಂಭಾಪುರಿ ಜಗದ್ಗುರುಗಳ ಆಶೀರ್ವಾದ ಬಲ ಸಕಲ ಸದ್ಭಕ್ತರಿಗೆ ಪ್ರಾಪ್ತವಾಗಲೆಂದು ಆಶಿಸಿದರು.

ಸಮಾರಂಭಕ್ಕೂ ಮುನ್ನ ಶ್ರೀ ರಂಭಾಪುರಿ ಜಗದ್ಗುರುಗಳವರನ್ನು ಸಾರೋಟ ಉತ್ಸವದ ಮೂಲಕ ಬರಮಾಡಿಕೊಂಡರು. ಕುಂಭ ಹೊತ್ತ ಮಹಿಳೆಯರು, ಆರತಿ ಹಿಡಿದ ಸುಮಂಗಲೆಯರು, ಹಲವಾರು ವಾದ್ಯ ವೈಭವಗಳೊಂದಿಗೆ ಬರಮಾಡಿಕೊಂಡು ಶ್ರೀ ರಂಭಾಪುರಿ ಜಗದ್ಗುರುಗಳವರ ಆಶೀರ್ವಾದ ಪಡೆದರು. ಪುರಾಣ ಮಂಗಲ ನಂತರ ಅನ್ನ ದಾಸೋಹ ಜರುಗಿತು.

## ಹಾದಿಬೀದಿಯಲ್ಲಿ ಮಾತಾಡುವವರ ವಿರುದ್ಧ ಕ್ರಮ ಆಗಬೇಕು

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಹಾದಿಬೀದಿಯಲ್ಲಿ ಮಾತಾಡುವವರ ವಿರುದ್ಧ ಕ್ರಮ ಆಗಬೇಕು ಎಂದು ಹೇಳುವ ಮೂಲಕ ಬಿಜೆಪಿ ಶಾಸಕ ಯತ್ನಾಳ್ ಗೆ ಃಜ ವಿಜಯೇಂದ್ರ ಟಾಂಗ್ ಕೊಟ್ಟಿದ್ದಾರೆ.

ಈ ಸಂಬಂಧ ಮಾತನಾಡಿದ ಅವರು, ಇಷ್ಟು ಕಾಲ ಸಹಿಸಿದ್ದೇವೆ. ಇನ್ನುಮುಂದೆ ಸಹಿಸಲು ಆಗಲ್ಲ. ಪಕ್ಷ ಸಂಘಟನೆಗೆ ಯತ್ನಾಳ್ ಸಹಕಾರ ಕೊಡಲಿ. ಇಲ್ಲದಿದ್ದರೆ ಹೈಕಮಾಂಡ್ ನಿರ್ಧಾರ ಕೈಗೊಳ್ಳಲಿ ಎಂದರು.

ಯತ್ನಾಳ್ ವಿಚಾರವನ್ನು ಹೈಕಮಾಂಡ್ ಗಂಭೀರವಾಗಿ ಪರಿಗಣಿಸಬೇಕು. ಏನಾದರೊಂದು ತೀರ್ಮಾನ ತೆಗೆದುಕೊಳ್ಳಬೇಕು ಎಂದು ವಿಜಯೇಂದ್ರ ಒತ್ತಾಯಿಸಿದರು.

ಪಕ್ಷದಲ್ಲಿ ಕೆಲವರು ಮಾತನಾಡುತ್ತಿರುವುದರ ಬಗ್ಗೆ, ಪಕ್ಷ ವಿರೋಧಿ ಹೇಳಿಕೆಗಳ ಬಗ್ಗೆ ಚರ್ಚೆ ಆಗಿದೆ. ಇದನ್ನ ಹೈ ಕಮಾಂಡ್ ಗಮನಕ್ಕೆ ತರಬೇಕು ಎಂದು ಚರ್ಚೆ ಆಗಿದೆ. ಹಾದಿಬೀದಿಯಲ್ಲಿ ಮಾತಾಡುವವರು ಯಾರೇ ಇರಲಿ ಕ್ರಮ ಆಗಬೇಕು ಎಂದು ಚರ್ಚಿಸಲಾಗಿದೆ ಎಂದು ತಿಳಿಸಿದರು. ಯತ್ನಾಳ್ ವಿರುದ್ಧ ಕ್ರಮ ವಿಚಾರವಾಗಿ ಪ್ರತಿಕ್ರಿಯಿಸಿ, ಇದರ ಬಗ್ಗೆ ನಾನು ಈಗ ಬಹಿರಂಗ ಚರ್ಚೆ ಮಾಡಲ್ಲ. ಈಗಾಗಲೇ ಈ ವಿಚಾರ ವರಿಷ್ಠರ ಅಂಗಳದಲ್ಲಿದೆ. ಅವರೂ ಕೂಡಾ ಶಿಸ್ತು ಸಮಿತಿ ಎದುರು ಹಾಜರಾಗಿ ಬಂದಿದ್ದಾರೆ. ಬಾಲ್ ಹೈಕಮಾಂಡ್ ಅಂಗಳದಲ್ಲಿದೆ, ಹೈಕಮಾಂಡ್ ತೀರ್ಮಾನ ಮಾಡುತ್ತೆ. ಶಿಸ್ತು ಉಲ್ಲಂಘನೆ ಇನ್ನೂ ಮುಂದುವರೆಸಿದರೆ ಕಾರ್ಯಕರ್ತರಿಗೂ ಬೇಸರವಾಗಿದೆ. ಪಕ್ಷದ ಬೆಳವಣಿಗೆಗೂ ಒಳ್ಳೆಯದಲ್ಲ. ಯಾರೇ ಇದ್ದರೂ ಪಕ್ಷದ ಚೌಕಟ್ಟಿನಲ್ಲೇ ಚರ್ಚೆ ಮಾಡಬೇಕು. ಹಾದಿಬೀದಿಯಲ್ಲಿ ಮಾತನಾಡುವವರ ವಿರುದ್ಧ ಗಂಭೀರ ಕ್ರಮ ಆಗಬೇಕು ಎಂದರು.

ಶ್ರೀ ದತ್ತಾತ್ರೇಯ ದೇವಸ್ಥಾನದ ವಿಪ್ರ ಸಭೆಯಲ್ಲಿ ಬ್ರಾಹ್ಮಣ ಮಹಾಸಭಾ ಅಧ್ಯಕ್ಷ ಅಶೋಕ ಹಾರನಹಳ್ಳಿ

# ಒಳಪಂಗಡಗಳ ನಡುವಿನ ವ್ಯತ್ಯಾಸ ಅಲಕ್ಷಿಸಿ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ



ಸನಾತನ ಧರ್ಮದ ಸಂಸ್ಥಾಪಕ ಜಗದ್ಗುರು ಶಂಕರಾಚಾರ್ಯರ ಬಗ್ಗೆ ಅವಹೇಳನಕಾರಿ ಹೇಳಿಕೆಯನ್ನು ಪತ್ರಿಕೆಯೊಂದರಲ್ಲಿ ಓದಿದ್ದೇನೆ. ಶಂಕರಾಚಾರ್ಯರು ಈ ಜಗತ್ತಿನಲ್ಲಿ ಅಳಿದು ಹೋಗುತ್ತಿದ್ದ ಹಿಂದೂ ಧರ್ಮವನ್ನು ಕಟ್ಟಿ ನಿಲ್ಲಿಸಿದ ಮಹನೀಯರು. ಅಂತಹವರ ವಿರುದ್ಧವಾಗಿ ಇಂತಹ ಹೇಳಿಕೆ ಕೊಡುವವರನ್ನು ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭೆಯು ಬಲವಾಗಿ ಖಂಡಿಸುತ್ತದೆ ಎಂದು ರಾಜ್ಯಾಧ್ಯಕ್ಷ ಅಶೋಕ ಹಾರನಹಳ್ಳಿ ಹೇಳಿದರು.

ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭೆಯ 50ನೇ ವರ್ಷದ ಸುವರ್ಣ ಮಹೋತ್ಸವದ ಕಾರ್ಯಕ್ರಮಕ್ಕೆ ಎಲ್ಲ ವಿಪ್ರರನ್ನು ಆಮಂತ್ರಿಲು ಪಟ್ಟಣದ ಶ್ರೀ ದತ್ತಾತ್ರೇಯ ದೇವಸ್ಥಾನಕ್ಕೆ ಆಗಮಿಸಿದ್ದ ಅವರು ಸಭೆಯನ್ನುದ್ದೇಶಿಸಿ ಮಾತನಾಡಿದರು.

ನಮ್ಮಲ್ಲಿನ ಒಳಪಂಗಡಗಳ ತಿಕ್ಕಾಟದಿಂದಾಗಿ ನಾವು ಅವಸಾನದ ಅಂಚಿಗೆ ತಲುಪುತ್ತಿದ್ದೇವೆ. ಇನ್ನಾದರೂ ನಾವು ಎಚ್ಚೆತ್ತುಕೊಳ್ಳದೆ ಹೋದರೆ ನಮ್ಮ ಅವಸಾನಕ್ಕೆ ನಾವೇ ಕಾರಣವಾಗುತ್ತೇವೆ. ಅದಕ್ಕಾಗಿ ನಾವು ಒಳಪಂಗಡಗಳ ನಡುವಿನ ವ್ಯತ್ಯಾಸವನ್ನು ಅಲಕ್ಷಿಸಿ ಎಲ್ಲರೂ ಒಕ್ಕಟ್ಟಾಗಲು ಪ್ರಯತ್ನಿಸಿದಾಗ ಮಾತ್ರ ಉದ್ಧಾರವಾಗಲು ಸಾಧ್ಯ. ಅಂತಹ ಒಂದು ಆಶಾದಾಯಕ ವಾತಾವರಣವನ್ನು ಈ ಪುಟ್ಟ ಗ್ರಾಮ ನರೇಗಲ್ಲದಲ್ಲಿ ಕಂಡು ನನಗೆ ಅತೀವ ಸಂತಸವಾಗಿದೆ. ಇಲ್ಲಿನ ಬ್ರಹ್ಮ ಸಮಾಜವು ಚಿಕ್ಕದಾದರೂ ಚೊಕ್ಕ ಕಾರ್ಯಕ್ರಮಗಳ ಮೂಲಕ ಈ ನಾಡಿನ ಗಮನ ಸೆಳೆಯುತ್ತಿರುವುದಕ್ಕೆ ಅಭಿನಂದನೆಗಳು ಎಂದರು.

ದಿವ್ಯ ಸಾನ್ನಿಧ್ಯ ವಹಿಸಿದ್ದ ಶ್ರೀ ದತ್ತಾವಧೂತ ಮಹಾರಾಜರು ಆಶೀರ್ವಚನ ನೀಡಿ, ಜನೇವರಿಯಲ್ಲಿ ನಡೆಯುವ ಸಮಾರಂಭದಲ್ಲಿ ಎಲ್ಲರೂ ಪಾಲ್ಗೊಳ್ಳೋಣ. ಈಗಿನ ರಾಜಾಧ್ಯಕ್ಷರು ಮತ್ತು ಅವರ ತಂಡ ಸಮಾಜವನ್ನು ಸಂಘಟಿಸುವಲ್ಲಿ ಪ್ರಾಮಾಣಿಕ ಪ್ರಯತ್ನವನ್ನು ಮಾಡುತ್ತಿದ್ದಾರೆ. ಇದನ್ನು ನಾವೆಲ್ಲರೂ ಬೆಂಬಲಿಸೋಣ ಎಂದರು.

ಸಭೆಯಲ್ಲಿ ಮಹಾಸಭಾದ ರಾಜ್ಯ ಪ್ರಧಾನ ಸಂಚಾಲಕರಾದ ಕಾರ್ತಿಕ ಬಾಪಟ್, ಎಸ್. ಸುಧಾಕರ ಬಾಬು, ವಿಜಯೇಂದ್ರ ನಾಡಜೋಷಿ, ಗದಗ ಜಿಲ್ಲಾ ಬ್ರಾಹ್ಮಣ ಸಮಾಜದ ಸಂಚಾಲಕ ಶ್ರೀನಿವಾಸ ಹುಯಿಲಗೋಳರವರನ್ನು ಗುರುಗಳು ಸನ್ಮಾನಿಸಿ, ಆಶೀರ್ವದಿಸಿದರು.

ಮದನ ಕುಲಕರ್ಣಿ, ರಾಮಚಂದ್ರ ಕುಲಕರ್ಣಿ, ಹರೀಶ ಕುಲಕರ್ಣಿ, ಡಾ. ಕೃಷ್ಣಾ ಕಾಳೆ, ಕಿರಣ ಕಾಳೆ ಸೇರಿದಂತೆ ಇತರರು ಇದ್ದರು. ಅನಿತಾ ಗ್ರಾಮಪುರೋಹಿತ ಪ್ರಾರ್ಥಿಸಿದರು. ಶ್ರೀಪಾದಭಟ್ಟ ಜೋಷಿ ಸ್ವಾಗತಿಸಿದರು. ಗದಗ ಜಿಲ್ಲಾಧ್ಯಕ್ಷ ವೆಂಕಟೇಶ ಕುಲಕರ್ಣಿ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಸ್ವಾಗತ ಸಮಿತಿಯ ಗೌರವಾಧ್ಯಕ್ಷ ಡಾ. ಜಿ.ಕೆ. ಕಾಳೆ ಅಧ್ಯಕ್ಷತೆ ವಹಿಸಿದ್ದರು. ಶ್ರೀ ದತ್ತ ಭಕ್ತ ಮಂಡಳಿ ಕಾರ್ಯದರ್ಶಿ ರಘುನಾಥ ಕೊಂಡಿ ನಿರೂಪಿಸಿದರು. ಆದರ್ಶ ಕುಲಕರ್ಣಿ ವಂದಿಸಿದರು.

ಬ್ರಾಹ್ಮಣರ ಎಲ್ಲ ಪಂಗಡಗಳನ್ನು ಒಗ್ಗೂಡಿಸುವ ಹಿನ್ನೆಲೆಯಲ್ಲಿ ಬರುವ ಜನೇವರಿ 18 ಮತ್ತು 19ರಂದು ಬೆಂಗಳೂರಿನಲ್ಲಿ ಬೃಹತ್ ವಿಪ್ರ ಸಮ್ಮೇಳನವನ್ನು ಆಯೋಜಿಸಲಾಗಿದೆ. ಈ ಸಮ್ಮೇಳನದಲ್ಲಿ ತಾವೆಲ್ಲರೂ ಪಾಲ್ಗೊಂಡು ಅದನ್ನು ಯಶಸ್ವಿ ಮಾಡುವುದರ ಜೊತೆಗೆ ಇತರೆ ಭಾಗದಲ್ಲಿನ ವಿಪ್ರ ಬಾಂಧವರನ್ನು ಪರಿಚಯಿಸಿಕೊಳ್ಳಲು ಇದೊಂದು ಸುವರ್ಣ ಅವಕಾಶ. ಈ ಸಮ್ಮೇಳನಕ್ಕೆ ನಿಮ್ಮನ್ನು ಆಮಂತ್ರಿಸಲು ನಾವಿಲ್ಲಿಗೆ ಬಂದಿದ್ದೇವೆ. ದಯಮಾಡಿ ಸಮ್ಮೇಳನಕ್ಕೆ ಎಲ್ಲರೂ ಆಗಮಿಸಿ ಎಂದು ಹಾರನಹಳ್ಳಿ ಹೇಳಿದರು.

ಬಿ.ಜಿ. ಅಣ್ಣಿಗೇರಿ ಗುರುಗಳ ಆಧ್ಯಾತ್ಮಿಕ, ಶೈಕ್ಷಣಿಕ ಚಿಂತನ ಮಾಲಿಕೆಯಲ್ಲಿ ಡಾ. ಪ್ರವೀಣ

# ಆಯುರ್ವೇದ ರಾಮಬಾಣವಿದ್ದಂತೆ

■ವಿಜಯಸಾಕ್ಷಿ ಸುದ್ದಿ, ಗದಗ



ಮನುಷ್ಯನ ಆರೋಗ್ಯ ಸುಧಾರಣೆಯಲ್ಲಿ ಆಯುರ್ವೇದ ಚಿಕಿತ್ಸಾ ಪದ್ಧತಿಯು ಯಾವುದೇ ಅಡ್ಡಪರಿಣಾಮವಿಲ್ಲದೆ ರಾಮಬಾಣದಂತೆ ಫಲಿತಾಂಶ ನೀಡಬಲ್ಲದು ಎಂದು ಡಾ. ಪ್ರವೀಣ ಹೇಳಿದರು.

ಅವರು ಗದುಗಿನ ಬಿ.ಜಿ. ಅಣ್ಣಿಗೇರಿ ಗುರುಗಳ ಆಶ್ರಮದಲ್ಲಿ ಬಿ.ಜಿ. ಅಣ್ಣಿಗೇರಿ ಗುರುಗಳ ಪ್ರತಿಭಾ ಪ್ರತಿಷ್ಠಾನ ಏರ್ಪಡಿಸಿದ್ದ ಬಿ.ಜಿ. ಅಣ್ಣಿಗೇರಿ ಗುರುಗಳ 62ನೇ ಆಧ್ಯಾತ್ಮಿಕ ಮತ್ತು ಶೈಕ್ಷಣಿಕ ಚಿಂತನ ಮಾಲಿಕೆಯಲ್ಲಿ 'ಆಯುರ್ವೇದ ಮನೆ ಮದ್ದು' ವಿಷಯವಾಗಿ ಉಪನ್ಯಾಸ ನೀಡಿದರು.

ಭಾರತೀಯ ವೈದ್ಯ ಪರಂಪರೆಯಲ್ಲಿ ಆಯುರ್ವೇದ ಪದ್ಧತಿಯು ಅತ್ಯಂತ ಜನಪ್ರಿಯತೆಯನ್ನು ಪಡೆದುಕೊಂಡಿದೆ. ರೋಗವನ್ನು ನಿಧಾನಗೊಳಿಸುವ ಅದ್ಭುತ ಶಕ್ತಿ ಆಯುರ್ವೇದಕ್ಕೆ ಇದೆ. ಈ ಹಿಂದೆ ಋಷಿಮುನಿಗಳು, ಸಾಧು-ಸಂತರು ಆಯುರ್ವೇದ ಪದ್ಧತಿಯನ್ನು ಅನುಸರಿಸುವ ಮೂಲಕ ಶತಾಯುಷಿಗಳಾಗಿ ಬಾಳಿದ್ದಾರೆ ಎಂದರು.

ಇಂದಿನ ಆಹಾರ ಪದ್ಧತಿ, ಬದಲಾದ ಜೀವನ ಶೈಲಿ, ಅವಸರದ ಜೀವನದಿಂದಾಗಿ ಮನುಷ್ಯನ ಆರೋಗ್ಯದ ಮೇಲೆ ಹಲವಾರು ಪರಿಣಾಮ ಬೀರುತ್ತಿವೆ. ಕಾರಣ ನಾವಿಂದು ಪರಿಶ್ರಮದ ಬದುಕು, ಸಾತ್ವಿಕ ಆಹಾರ ಪದ್ಧತಿ, ಸರಳ ಮತ್ತು ಸಹಜ ಜೀವನ ಶೈಲಿಯನ್ನು ರೂಢಿಸಿಕೊಳ್ಳಬೇಕು ಎಂದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಪ್ರತಿಷ್ಠಾನದ ಅಧ್ಯಕ್ಷ ಶಿವಕುಮಾರ ಪಾಟೀಲ, ಆಶ್ರಮದಲ್ಲಿ ಪ್ರತಿ ತಿಂಗಳು ನಡೆಸಿಕೊಂಡು ಬಂದಿರುವ ಆಧ್ಯಾತ್ಮಿಕ-ಶೈಕ್ಷಣಿಕ ಚಿಂತನ ಮಾಲಿಕೆ ಉತ್ತಮ ಫಲಿತಾಂಶ ನೀಡುತ್ತಿದ್ದು, ಆಶ್ರಮದ ವಿದ್ಯಾರ್ಥಿಗಳ ಜ್ಞಾನದ ದಿಗಂತವನ್ನು ಹೆಚ್ಚಿಸುವಲ್ಲಿ ಬಹಳಷ್ಟು ಉಪಯುಕ್ತವಾಗಿದೆ ಬರಲಿರುವ ದಿನಗಳಲ್ಲಿ ಈ ಮಾಲಿಕೆಯನ್ನು ಇನ್ನಷ್ಟು ಪರಿಣಾಮಕಾರಿ ಕಾರ್ಯಕ್ರಮವನ್ನಾಗಿ ಪರಿವರ್ತಿಸಲಾಗುವದು ಎಂದರು.

ವೇದಿಕೆಯ ಮೇಲೆ ಪ್ರತಿಷ್ಠಾನದ ಉಪಾಧ್ಯಕ್ಷ ಶಂಕ್ರಪ್ಪ ಅಣ್ಣಿಗೇರಿ, ಸದಸ್ಯರಾದ ಡಾ. ಚನ್ನಪ್ಪ ಗೌಡರ್ ಮತ್ತು ಡಾ. ಬಸಯ್ಯ ಬೆಳ್ಳೆರಿಮಠ ಉಪಸ್ಥಿತರಿದ್ದರು.

ಶಿಕ್ಷಕಿ ಮಂಜುಳಾ, ಹುಲಿಗೆಮ್ಮ ಸೇರಿದಂತೆ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು. ಪ್ರತಿಭಾ ಪ್ರತಿಷ್ಠಾನದ ಕಾರ್ಯದರ್ಶಿ ಬೆಟ್ಟದೂರ ವಿದ್ಯಾರ್ಥಿಗಳಿಗೆ ನೀತಿ ಪಾಠ ಹೇಳಿದರು, ಕೊನೆಗೆ ಶಿಕ್ಷಕಿ ಮಂಜುಳಾ ವಂದಿಸಿದರು.

## ತಾಲೂಕಾ ಶಸಾಪ ಅಧ್ಯಕ್ಷರಾಗಿ ಎಂ.ಕೆ. ಲಮಾಣಿ ಆಯ್ಕೆ



■ವಿಜಯಸಾಕ್ಷಿ ಸುದ್ದಿ, ಶಿಹಟ್ಟಿ

ಪಟ್ಟಣದ ಫಕೀರೇಶ್ವರ ನಗರದ ಶಿಕ್ಷಕರ ಸೊಸೈಟಿಯಲ್ಲಿ ಶನಿವಾರ ಜರುಗಿದ ಸಭೆಯಲ್ಲಿ ತಾಲೂಕಾ ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷರಾಗಿ ಎಂ.ಕೆ. ಲಮಾಣಿ ಆಯ್ಕೆಯಾಗಿದ್ದಾರೆ.

ಜಿಲ್ಲಾಧ್ಯಕ್ಷ ಕೆ.ಎ. ಬಳಿಗೇರ ಅಧ್ಯಕ್ಷತೆಯಲ್ಲಿ ಜರುಗಿದ ಸಭೆಯಲ್ಲಿ ಸರ್ವಾನುಮತದ ಅಭಿಪ್ರಾಯದ ಮೇರೆಗೆ ಲಮಾಣಿ ಆಯ್ಕೆಯಾಗಿದ್ದಾರೆ. ಎಂ.ಕೆ. ಲಮಾಣಿ ಈ ಹಿಂದೆ ತಾಲೂಕಾ ಕಸಾಪ ಅಧ್ಯಕ್ಷರಾಗಿ, ಸಧ್ಯ ಮಾಧ್ಯಮಿಕ ಶಾಲಾ ನೌಕರರ ಸಂಘದ ಜಿಲ್ಲಾಧ್ಯಕ್ಷರಾಗಿ, ಜೊತೆಗೆ ಜಿಲ್ಲಾ ಉಪನ್ಯಾಸಕರ ಸಂಘದ ಪ್ರಧಾನ ಕಾರ್ಯದರ್ಶಿಯಾಗಿ, ವಿವಿಧ ಸಂಘ-ಸಂಸ್ಥೆಗಳಲ್ಲಿ ಕೆಲಸ ಮಾಡಿದ್ದಾರೆ. ಈ ಸಂದರ್ಭದಲ್ಲಿ ಜಿ.ಪಂ ಮಾಜಿ ಸದಸ್ಯ ಶಿವಪ್ರಕಾಶ ಮಹಾಜನಶೆಟ್ಟರ, ಸಿ.ಸಿ. ನೂರಶೆಟ್ಟರ, ಎಚ್.ಡಿ. ಮಾಗಡಿ, ಬಿ.ಎಸ್. ಹಿರೇಮಠ, ಎಚ್.ಎಂ. ದೇವಗಿರಿ, ಚಾಂದಸಾಬ ಮುಳಗುಂದ, ಎಸ್.ಬಿ. ಹೊಸೂರ, ಎಸ್.ಎಸ್. ಹಿರೇಮಠ, ಗಿರೀಶ ಕೋಡಬಾಳ, ಅಕ್ಬರಸಾಬ ಯಾದಗಿರಿ, ಜಿಲ್ಲಾ ಕದಳಿ ಮಹಿಳಾ ವೇದಿಕೆ ಅಧ್ಯಕ್ಷೆ ಸುಧಾ ಹುಚ್ಚಣ್ಣವರ, ನಂದಾ ಕಪ್ಪತ್ತನವರ, ರೇಣುಕಾ ಜಗಂಡಬಾವಿ, ರತ್ನಾ ಬದಿ, ಗೀತಾ ಹಲಸೂರ, ಬಸವರಾಜ ಕಳಸಾಪೂರ, ಸಿದ್ದು ಹಲಗಸೂರ, ಸುನೀಲ ಲಮಾಣಿ, ಮುತ್ತು ಕಪ್ಪತ್ತನವರ ಮುಂತಾದವರು ಉಪಸ್ಥಿತರಿದ್ದರು.

## ಕಕ್ಷಿದಾರರಿಗೆ ನ್ಯಾಯ ಒದಗಿಸುವುದು ವಕೀಲರ ಕರ್ತವ್ಯ

▶▶ಮೊದಲನೇ ಪುಟದಿಂದ

ಈ ಸ್ಪರ್ಧೆಯಿಂದ ವಿದ್ಯಾರ್ಥಿಗಳಲ್ಲಿ ಆತ್ಮವಿಶ್ವಾಸ ಮತ್ತು ಅಧ್ಯಯನ ಸ್ವರೂಪ ತಿಳಿಯುತ್ತದೆ. ಹೀಗಾಗಿ ವಿದ್ಯಾರ್ಥಿಗಳು ಸ್ಪರ್ಧೆಗಳಲ್ಲಿ ಸೋಲು-ಗೆಲವು ಲೆಕ್ಕಾಚಾರ ಮಾಡದೇ ವಿಷಯವನ್ನು ಮಂಡಿಸುವುದಕ್ಕೆ ಮುಂದಾಗಬೇಕು ಎಂದರು.

ಹೈಕೋರ್ಟ್ ನ್ಯಾಯಾಧೀಶ ವೇದವ್ಯಾಸ ಶ್ರೀಶಾನಂದ ಮಾತನಾಡಿ, ನಾವು ಪ್ರಬುದ್ಧ ವಕೀಲರಾಗಿದ್ದೇವೆ ಎನ್ನುವ ಮನೋಭಾವನೆ ಬರಬಾರದು. ಅಣುಕು ನ್ಯಾಯಾಲಯವೇ ಬೇರೆ, ನೈಜ ನ್ಯಾಯಾಲಯಗಳಲ್ಲಿನ ಸ್ಥಿತಿ-ಗತಿಗಳೇ ಬೇರೆ.

ಇಲ್ಲಿ ಸೋಲು-ಗೆಲವು ಮುಖ್ಯವಲ್ಲ, ನಾವು ಪ್ರಕರಣದ ಎಷ್ಟು ವಿಷಯವನ್ನು ಗ್ರಹಿಕೆ ಮಾಡಿಕೊಂಡಿದ್ದೇವೆ ಎಂಬುದು ಮುಖ್ಯವಾಗಿರುತ್ತದೆ. ಅಲ್ಲದೆ ನೈಜ ನ್ಯಾಯಾಲಯಗಳಲ್ಲಿ ತಮ್ಮನ್ನು ನಂಬಿಕೊಂಡು ಬಂದಿರುವ ಕಕ್ಷಿದಾರರ ಜೀವ ಮತ್ತು ಮಾನ ಅಡಗಿರುತ್ತದೆ. ಆದ್ದರಿಂದ ಯುವ ವಕೀಲರು ಯಾವುದೇ ಪ್ರಕರಣಗಳೇ ಇರಲಿ ಅವುಗಳ ವಿಷಯ ವಸ್ತು ಮತ್ತು ಅದಕ್ಕೆ ಅವಶ್ಯವಿರುವ ಕಾನೂನುಗಳು ಮತ್ತು ಸಂಬಂಧಿಸಿದ ನ್ಯಾಯಾಲಯದ ತೀರ್ಪುಗಳನ್ನು ಚೆನ್ನಾಗಿ ಅಧ್ಯಯನ ಮಾಡಿ ನ್ಯಾಯಾಲಯಗಳಲ್ಲಿ ವಾದಪತ್ರದ ಜತೆಗೆ ವಾದವನ್ನು ಮಂಡನೆ ಮಾಡಬೇಕು ಎಂದರು.

ಸ್ಪರ್ಧೆಯಲ್ಲಿ ಬೆಳಗಾವಿಯ ಬಿ.ವಿ. ಬೆಲ್ಲದ ಕಾನೂನು ಮಹಾವಿದ್ಯಾಲಯದ ವಿದ್ಯಾರ್ಥಿಗಳು ಪ್ರಥಮ ಬಹುಮಾನ ಪಡೆದುಕೊಂಡರು. ತಮಿಳುನಾಡಿನ ಸವಿತಾ ಕಾನೂನು ಕಾಲೇಜಿನ ವಿದ್ಯಾರ್ಥಿಗಳು ದ್ವಿತೀಯ ಸ್ಥಾನ ಪಡೆದುಕೊಂಡರು.

ಕರ್ನಾಟಕ ಹೈಕೋರ್ಟ್ ನ್ಯಾಯಾಧೀಶ ವಿಜಯಕುಮಾರ ಪಾಟೀಲ, ಮಖಿಮಣಿಗಣೇಶಯ್ಯ ಉಮಾ, ಉಮೇಶ ಮಂಜುನಾಥಭಟ್ಟ ಅಡಿಗ, ಕೆ.ಎಲ್.ಇ ಕಾನೂನು ಕಾಲೇಜಗಳ ನಿರ್ದೇಶಕ ಶ್ರೀಶೈಲಪ್ಪ ಮೆಟ್ಟಿಗುಡ್ಡ, ಬೆಂಗಳೂರು ಲಾ ಕಾಲೇಜಿನ ಪ್ರಾಚಾರ್ಯ ಮಲ್ಲಿಕಾರ್ಜುನಯ್ಯ, ಉಪನ್ಯಾಸಕ ಡಾ. ವಿಜಯ ಮುರದಂಡೆ, ಡಾ. ಶ್ರೀನಿವಾಸ ಪಾಲ್ಕೊಂಡ, ಡಾ. ಸಿ.ವಿ. ಜ್ಯೋತಿ, ಸಿ.ಎಚ್. ರಾಚನ್ನವರ, ಶರತ್ ದರಬಾರೆ ಪಾಲ್ಗೊಂಡಿದ್ದರು. ಉಪನ್ಯಾಸಕ ಆರ್.ಎಸ್. ಉಮೇಶ ಸ್ವಾಗತಿಸಿದರು. ಪ್ರಾಚಾರ್ಯ ಜೈಹನುಮಾನ ಎಚ್ ವಂದಿಸಿದರು

## ವಾಟ್ಸಾಪ್ ಸ್ನೇಹಿತನ ಜೊತೆ ಮಹಿಳೆ ಲವ್ವಿಡವ್ವಿ: ಚಾಕುವಿನಿಂದ ಚುಚ್ಚಿ ಬರ್ಬರವಾಗಿ ಹತ್ಯೆಗೈದ ಪ್ರಿಯಕರ

■ವಿಜಯಸಾಕ್ಷಿ ಸುದ್ದಿ, ಚಿಕ್ಕಮಗಳೂರು

ಅನೈತಿಕ ಸಂಬಂಧಕ್ಕೆ ಗೃಹಣಿಯ ಬರ್ಬರ ಹತ್ಯೆ ನಡೆದಿದೆ. ಚಿಕ್ಕಮಗಳೂರಿನ ಎನ್.ಆರ್.ಪುರ ತಾಲೂಕಿನ ಬಾಳೆಹೊನ್ನೂರು ಸಮೀಪದ ಕಿಚ್ಚಬ್ಬಿ ಗ್ರಾಮದಲ್ಲಿ ಈ ಘಟನೆ ನಡೆದಿದೆ. ಕಿಚ್ಚಬ್ಬಿ ಗ್ರಾಮದ ತೃಪ್ತಿ 25 ಮೃತ ದುರ್ದೈವಿ. 25 ವರ್ಷದ ಗೃಹಿಣಿಯನ್ನ ಬರ್ಬರವಾಗಿ ಹತ್ಯೆಗೈಯ್ಯಲಾಗಿದೆ. ವಾಟ್ಸಾಪ್ ಸ್ನೇಹಿತ ಚಿರಂಜೀವಿ ಕೊಲೆ ಆರೋಪಿಯಾಗಿದ್ದು, ಚಾಕುವಿನಿಂದ ಚುಚ್ಚಿದರೂ ತೃಪ್ತಿ ಸಾಯಲಿಲ್ಲ ಎಂದು ಆರೋಪಿ ಕೆರೆಗೆ ಎಸೆದಿದ್ದಾನೆ.

ಪಿಂಚಣಿ ವಂಚಿತರಿಂದ 'ಬೆಳಗಾವಿ ಚಲೋ' ಡಿ.17ಕ್ಕೆ

# ಸರಕಾರಕ್ಕೆ ಕೊನೆಯ ಎಚ್ಚರಿಕೆ

■ವಿಜಯಸಾಕ್ಷಿ ಸುದ್ದಿ, ಗದಗ




ಪಿಂಚಣಿ ವಂಚಿತ ಅನುದಾನಿತ ಶಾಲೆ-ಕಾಲೇಜುಗಳ ನೌಕರರು ಡಿ. 17ರಂದು ಬೆಳಗಾವಿ ಚಲೋ ಹಮ್ಮಿಕೊಂಡಿದ್ದು, ಈ ಹೋರಾಟದಲ್ಲಿ ಸುಮಾರು 18 ಸಾವಿರ ನೌಕರರು ಭಾಗಿಯಾಗಲಿದ್ದಾರೆ ಎಂದು ಅನುದಾನಿತ ಶಾಲೆ-ಕಾಲೇಜುಗಳ ನೌಕರರ ಸಂಘದ ಅಧ್ಯಕ್ಷ ಜಿ. ಹನುಮಂತಪ್ಪ ಹೇಳಿದರು.

ಶನಿವಾರ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, 2006ರಿಂದ ಈಚೆಗೆ ಅನುದಾನಿತ ಶಾಲಾ-ಕಾಲೇಜುಗಳ ನೌಕರರಿಗೆ ಎನ್‌ಪಿಎಸ್ ಸಹ ಇಲ್ಲ, ಹಳೆ ಪಿಂಚಣಿಯೂ ಇಲ್ಲ. ಪಿಂಚಣಿಗಾಗಿ ಕಳೆದ ವರ್ಷ ಬೆಂಗಳೂರಿನ ಫ್ರೀಡಂ ಪಾರ್ಕನಲ್ಲಿ ಸತತ 141 ದಿನಗಳ ಕಾಲ ಧರಣಿ ನಡೆಸಿದರೂ ಸರಕಾರ ನಮ್ಮ ಮನವಿಗೆ ಸ್ಪಂದಿಸಿಲ್ಲ. ಹೀಗಾಗಿ ಸರಕಾರಕ್ಕೆ ಕೊನೆಯ ಎಚ್ಚರಿಕೆ ನೀಡುವ ಸಲುವಾಗಿ ಬೆಳಗಾವಿ ಚಲೋ ಹಮ್ಮಿಕೊಳ್ಳಲಾಗಿದೆ ಎಂದರು.

ಪಿಂಚಣಿಗಾಗಿ ನಡೆದ ಹೋರಾಟಕ್ಕೆ ಬೆಂಬಲ ಸೂಚಿಸಿದ್ದ ಸಿದ್ದರಾಮಯ್ಯ, ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ಪಿಂಚಣಿ ನೀಡುವುದಾಗಿ ಭರವಸೆ ನೀಡಿದ್ದರು. ಅಲ್ಲದೇ ಕಾಂಗ್ರೆಸ್ ತನ್ನ ಚುನಾವಣೆ ಪ್ರಣಾಳಿಕೆಯಲ್ಲಿಯದ್ದೀ ವಿಚಾರವನ್ನು ಸೇರಿಸಿತು. ಆದರೆ ರಾಜ್ಯದಲ್ಲಿ ಕಾಂಗ್ರೆಸ್ ನೇತೃತ್ವದ ಸರಕಾರ ಅಧಿಕಾರಕ್ಕೆ ಬಂದು ಒಂದೂವರೆ ವರ್ಷ ಕಳೆದರೂ ಪಿಂಚಣಿ ಜಾರಿಗೊಳಿಸುವ ಯಾವುದೇ ಕೆಲಸ ಮಾಡಿಲ್ಲ ಎಂದು ಆರೋಪಿಸಿದರು.


ರಾಜ್ಯದಲ್ಲಿ 2006ಕ್ಕಿಂತ ಪೂರ್ವದಲ್ಲಿ ನೇಮಕವಾಗಿ, ಬಳಿಕ ಅನುದಾನಕ್ಕೆ ಒಳಪಟ್ಟು ಸೇವೆ ಸಲ್ಲಿಸಿದ ಸುಮಾರು 4 ಸಾವಿರ ನೌಕರರು ಈಗಾಗಲೇ ನಿವೃತ್ತರಾಗಿದ್ದಾರೆ. ಆದರೂ ಸರಕಾರದ ಬಿಡಿಗಾಸೂ ಅವರಿಗೆ ಸಿಕ್ಕಿಲ್ಲ. ಸರಕಾರದ ಧೋರಣೆಯಿಂದ ಬೇಸತ್ತು ಕೆಲವರು ಆತ್ಮಹತ್ಯೆ ಮಾಡಿಕೊಂಡರು, ಹೃದಯಾಘಾತಕ್ಕೆ ಒಳಗಾಗಿ ಜೀವ ಕಳೆದುಕೊಂಡರೂ ಸರಕಾರ ಪಿಂಚಣಿ ವಂಚಿತರ ಕಣ್ಣೀರು ಒರೆಸುವ ಕೆಲಸ ಮಾಡುತ್ತಿಲ್ಲ ಎಂದು ಆಪಾದಿಸಿದರು.

ಸುದ್ದಿಗೋಷ್ಠಿಯಲ್ಲಿ ಎಸ್.ಎಂ. ಅಗಡಿ, ರವಿ ಕೋಟೆ, ಬನೇಶ ನಾಯಕ, ಹೇಮಯ್ಯ ಕುಲಕರ್ಣಿ, ಬಸವರಾಜ ಕೊರ್ಲಹಳ್ಳಿ ಮುಂತಾದವರು ಉಪಸ್ಥಿತರಿದ್ದರು.

ಅಖಿಲ ಕರ್ನಾಟಕ ಬ್ರಾಹ್ಮಣ ಅಭಿವೃದ್ಧಿ ನಿಗಮದ ಮಾಜಿ ಸದಸ್ಯ ಮದನ ಕುಲಕರ್ಣಿ

# ಸಮಯ ಬಂದರೆ ಬ್ರಾಹ್ಮಣರು ಹೋರಾಟಕ್ಕೂ ಸಿದ್ಧ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ



ಬ್ರಾಹ್ಮಣರನ್ನು ಬಹಳಷ್ಟು ಜನ ಅಶಕ್ತರೆಂದು ತಿಳಿದಿದ್ದಾರೆ. ಗೌರವಕ್ಕೆ ಹೆದರಿ ಸುಮ್ಮನಿರುವುದನ್ನು ಅವರ ದೌರ್ಬಲ್ಯವೆಂದು ತಿಳಿದಿದ್ದಾರೆ. ಹೀಗಾಗಿ ಸಮಾಜದಲ್ಲಿ ಅವರ ಬಗ್ಗೆ ಅವಹೇಳನ, ನಿಂದನೆ ಸದಾಕಾಲ ನಡೆದಿರುವುದು ಕಂಡು ಬರುತ್ತದೆ. ಆದರೆ ಬ್ರಾಹ್ಮಣರೆಂದಿಗೂ ಅಶಕ್ತರಲ್ಲ, ಸಮಯ ಬಂದರೆ ಅವರು ಹೋರಾಟಕ್ಕೂ ಸಿದ್ಧ ಎಂದು ಅಖಿಲ ಕರ್ನಾಟಕ ಬ್ರಾಹ್ಮಣ ಅಭಿವೃದ್ಧಿ ನಿಗಮದ ಹಿಂದಿನ ಸದಸ್ಯ ಮದನ ಕುಲಕರ್ಣಿ ಹೇಳಿದರು.

ಪಟ್ಟಣದ ಶ್ರೀ ದತ್ತಾತ್ರೇಯ ದೇವಸ್ಥಾನದಲ್ಲಿ ಅಖಂಡ ಹನುಮಾನ ಚಾಲೀಸಾ ಪಠಣೆಯ ನಿಮಿತ್ತ ಶುಕ್ರವಾರ ಸಂಜೆ ಶೋಭಾಯಾತ್ರೆಯ ನಂತರ ನಡೆದ ಸಭೆಯಲ್ಲಿ ಅವರು ಮಾತನಾಡಿದರು.

ಸಮಾಜದಲ್ಲಿನ ಎಲ್ಲ ವ್ಯಕ್ತಿ ಮತ್ತು ಇತರೆ ಸಮಾಜಗಳೊಂದಿಗೆ ಹೊಂದಿಕೊಂಡು ಹೋಗುವ ಗುಣ ಬ್ರಾಹ್ಮಣರ ರಕ್ತದಲ್ಲಿ ಬಂದಿದೆ. ಆದರೆ, ಕೆಲವರು ಅವರನ್ನು ಸುಮ್ಮನೆ ಹೀಯಾಳಿಸುವ ಕಾರ್ಯಕ್ಕೆ ಇಳಿಯುತ್ತಿದ್ದಾರೆ. ನೀವೂ ಬಾಳಿ, ನಮ್ಮನ್ನೂ ಬಾಳಲು ಬಿಡಿ. ಇಲ್ಲವಾದರೆ ಹೋರಾಟಕ್ಕೆ ಬ್ರಾಹ್ಮಣರು ಸಿದ್ಧ. ನರೇಗಲ್ಲ ಪಟ್ಟಣದ ಬ್ರಹ್ಮ ಸಮಾಜದ ಒಗ್ಗಟ್ಟನ್ನು ಕಂಡು ಖುಷಿಯಾಗಿದೆ. ಸದ್ಗುರುಗಳ ಶೋಭಾಯಾತ್ರೆಯು ಅತ್ಯಂತ ಮನೋಹರವಾಗಿತ್ತಲ್ಲದೆ, ಇತರರಿಗೆ ಅದು ಮಾದರಿಯೂ ಆಗಿದೆ. ಈ ಸಂಘಟನೆ ಹೀಗೇ ಮುಂದುವರೆಯಲಿ ಎಂದರು.

ಸಭೆಯಲ್ಲಿ ಗದಗ ಜಿಲ್ಲಾ ಬ್ರಾಹ್ಮಣ ಸಮಾಜದ ಅಧ್ಯಕ್ಷ ವೆಂಕಟೇಶ ಜೋಷಿ, ವಿವೇಕ ಕುಲಕರ್ಣಿಯವರಿಗೆ ಶ್ರೀಗಳು ಗೌರವ ಶ್ರೀರಕ್ಷೆ ನೀಡಿದರು. ಡಾ. ಜಿ.ಕೆ. ಕಾಳೆ, ಪ್ರಕಾಶ ಕುಲಕರ್ಣಿ, ಎ.ಜಿ. ಕುಲಕರ್ಣಿ, ಅರುಣ ಕುಲಕರ್ಣಿ ಸೇರಿದಂತೆ ಇತರರು ಇದ್ದರು. ಸೀಮಾ ಕೊಂಡಿ ಪ್ರಾರ್ಥಿಸಿದರು. ಶ್ರೀ ದತ್ತ ಭಕ್ತ ಮಂಡಳಿ ಅಧ್ಯಕ್ಷ ಡಾ. ನಾಗರಾಜ ಗ್ರಾಮಪುರೋಹಿತ ಸ್ವಾಗತಿಸಿದರು. ಶ್ರೀಪಾದಭಟ್ಟ ಜೋಷಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಮುಖ್ಯ ಶಿಕ್ಷಕ ಸುನೀಲ ಅಂಬೇಕರ ನಿರೂಪಿಸಿದರು. ಶ್ರೀ ದತ್ತಭಕ್ತ ಮಂಡಳಿಯ ಕಾರ್ಯದರ್ಶಿ ರಘುನಾಥ ಕೊಂಡಿ ವಂದಿಸಿದರು.

ದಿವ್ಯ ಸಾನ್ನಿಧ್ಯ ವಹಿಸಿದ್ದ ಹೆಬ್ಬಳ್ಳಿಯ ಪ.ಪೂ ಶ್ರೀ ದತ್ತಾವಧೂತ ಮಹಾರಾಜರು ಆಶೀರ್ವಚನ ನೀಡಿ, ಮನುಷ್ಯ ಎಂದಿಗೂ ಸಮಾಜ ಜೀವಿ. ಎಲ್ಲರಿಗೂ ಅವರವರ ಧರ್ಮ ಅವರಿಗೆ ದೊಡ್ಡದು. ಹಾಗೆಂದು ಬೇರೆ ಧರ್ಮವನ್ನು ಹೀಯಾಳಿಸುವ ಕಾರ್ಯಕ್ಕೆ ಎಂದಿಗೂ ಮುಂದಾಗಬಾರದು. ಎಲ್ಲರೂ ತಮ್ಮ ತಮ್ಮ ಧರ್ಮಾಚರಣೆಗಳನ್ನು ಮಾಡಿಕೊಳ್ಳಬೇಕು, ಜಗತ್ತಿನ ಎಲ್ಲ ಜನರೊಂದಿಗೆ ಎಂದಿಗೂ ಸೌಹಾರ್ದತೆಯಿಂದ, ಪ್ರೀತಿ, ವಿಶ್ವಾಸಗಳಿಂದ ಬಾಳಬೇಕು ಎಂದರು.

## ಗದಗ-ಬೆಟಗೇರಿ: ಇಂದಿನ ನೀರು ಪೂರೈಕೆ ವಿವರ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಡಿಸೆಂಬರ್ ದಿ. 08 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

ಸ್ಥಳಗಳ ವಿವರ: ವಾರ್ಡ್ ನಂ. 7 - ಶಿವಾಜಿ ನಗರ ಪೂರ್ತಿ ಭಾಗಗಳು. ವಾರ್ಡ್ ನಂ. 33 - ಜಾಕೀರ ಹುಸೇನ್ ಕಾಲೋನಿ, ಗಡ್ಡಿಯವರ ಲೈನ್, ಬಸಪ್ಪರವರ ಲೈನ್, ವೀರೇಶ್ವರ ನಗರ, ಜಯಶ್ರೀ ಪವಾರ ಲೈನ್, ಬೂದಿಹಾಳರವರ ಲೈನ್, ಸಹನಾ ಅಪಾರ್ಟ್ಮೆಂಟ್, ಬಸವ ಅಪಾರ್ಟ್ಮೆಂಟ್, ಗಾಯಕವಾಡರವರ ಲೈನ್, ಕರಿಗೌಡ್ರ ಲೈನ್, ಪಂಚಮುಖಿ ದೇವಸ್ಥಾನ, ಬೆಲ್ಲದ, ಬಾಕಳೆ, ಅಬ್ಬಿಗೇರಿ ಲೈನ್, ಕಲಾಲ ಲೈನ್, ಮುಂಡೇವಾಡಿ ಅವರ ಲೈನ್, ಮಂಗಳೂರು ಸರ್ ಲೈನ್, ಬ್ಯಾಂಕರ್ಸ್ ಕಾಲೋನಿ ಉಳಿದ ಕೆಲವು ಭಾಗಗಳು.

ವಾರ್ಡ್ ನಂ. 30, 34 - ಹುಡ್ಕೋ ಮೇಲಿನ ಪೂರ್ತಿ ಭಾಗಗಳು. ವಾರ್ಡ್ ನಂ. 2 - ಸೆಟ್ಲಮೆಂಟ್, ಮಾರುತಿ ಗುಡಿ ಲೈನ್, ಹರಣಶಿಕಾರಿ ಓಣಿ, ಗಾಂಧಿನಗರ, ಕುಷ್ಟಗಿ ಚಾಳ, ಸ್ಲಾಬ್ ಮನೆ ಉಳಿದ ಕೆಲವು ಭಾಗಗಳು.

ಪ್ರಕಟಣೆ : ಯಾವತ್ತೂ ಗದಗ-ಬೆಟಗೇರಿ ಅವಳಿ ನಗರದ ಸಾರ್ವಜನಿಕರಿಗೆ ತಿಳಿಸುವುದೇನೆಂದರೆ, ತಮ್ಮ ನೀರಿನ ಕರವನ್ನು ತುಂಬಲು ಗದಗ-ಬೆಟಗೇರಿ ನಗರಸಭೆ ಪ್ರಕಟಣೆಯ ಮೂಲಕ ತಿಳಿಸಲಾಗಿದೆ. ಒಂದು ವೇಳೆ ಬಾಕಿ ಉಳಿದ ನೀರಿನ ಬಿಲ್ ತುಂಬದೇ ಹೋದರೆ, ನಳಗಳನ್ನು ಬಂದ ಮಾಡಲಾಗುತ್ತದೆ. ಆದ ಕಾರಣ ನೀರಿನ ಕರವನ್ನು ತುಂಬಲು ಪ್ರಕಟಣೆ ಮೂಲಕ ಸಾರ್ವಜನಿಕರಿಗೆ ತಿಳಿಸಲಾಗಿದೆ.

**ಅಲೆಮಾರಿಗಳ ಕುಂದುಕೊರತೆ ಸಭೆಯಲ್ಲಿ ಪ.ಜಾ/ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಪಲ್ಲವಿ ಜಿ**

# ಸರಕಾರದ ಯೋಜನೆಗಳನ್ನು ಸರಿಯಾಗಿ ತಲುಪಿಸಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಶೈಕ್ಷಣಿಕ ಹಾಗೂ ಆರ್ಥಿಕವಾಗಿ ಹಿಂದುಳಿರುವ ಅಲೆಮಾರಿ ಸಮುದಾಯಕ್ಕೆ ಸರ್ಕಾರದ ಹಲವು ಕಲ್ಯಾಣ ಕಾರ್ಯಕ್ರಮಗಳನ್ನು ಜಾರಿಗೊಳಿಸುವ ಮೂಲಕ ಸದೃಢರನ್ನಾಗಿಸುವ ಕಾರ್ಯ ಮಾಡುತ್ತಿದೆ. ಈ ನಿಟ್ಟಿನಲ್ಲಿ ಪ.ಜಾ/ಪ.ಪಂಗಳ ಅಲೆಮಾರಿ, ಅರೆಅಲೆಮಾರಿ ಸಮುಧಾಯಗಳ ಅಭಿವೃದ್ಧಿಗೆ ಸರಕಾರ ನೀಡಿದ ಎಲ್ಲ ಯೋಜನೆಗಳು ಜನರಿಗೆ ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳು ತಲುಪಿಸಬೇಕು ಎಂದು ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಪಲ್ಲವಿ ಜಿ. ಅಧಿಕಾರಿಗಳಿಗೆ ತಿಳಿಸಿದರು.

ಅವರು ಸಮೀಪದ ಬಾಲೇಹೊಸೂರು ಗ್ರಾಮದಲ್ಲಿ ಶನಿವಾರ ಅಲೆಮಾರಿಗಳ ಕುಂದುಕೊರತೆ ಸಭೆಯಲ್ಲಿ ಭಾಗವಹಿಸಿ ಮಾತನಾಡುತ್ತಿದ್ದರು.

ಅಲೆಮಾರಿ ಹಾಗೂ ಅರೆ ಅಲೆಮಾರಿಗಳಲ್ಲಿ 46 ಜನಾಂಗದವರಿದ್ದು, ಇವರು ಆರ್ಥಿಕ ಮತ್ತು ಅಭಿವೃದ್ಧಿ ಚಟುವಟಿಕೆ ಕೈಗೊಂಡು ಸ್ಥಿರವಾಗಿ ಒಂದು ಕಡೆ ನೆಲೆಸುವಂತೆ ಮಾಡಲು ಕರ್ನಾಟಕ ಅಲೆಮಾರಿ ಮತ್ತು ಅರೆ ಅಲೆಮಾರಿ ನಿಗಮದಿಂದ ವಿವಿಧ ಯೋಜನೆಗಳನ್ನು ಜಾರಿಗೆ ತರಲಾಗಿದೆ. ಗದಗ ಜಿಲ್ಲೆಯಲ್ಲಿ ಅಲೆಮಾರಿ ಸಮುದಾಯದವರು ಹೆಚ್ಚಿನ ಸಂಖ್ಯೆಯಲ್ಲಿದ್ದು, ನಿಗಮ ಅಲೆಮಾರಿ ಜನಾಂಗದ ಅಭಿವೃದ್ಧಿಗೆ ಪೂರಕವಾಗಿದೆ. ಪ್ರತಿ ಜಿಲ್ಲೆಯಲ್ಲೂ ಪ್ರವಾಸ ಮಾಡಿ ಅಲೆಮಾರಿಗಳ ಸ್ಥಿತಿಗತಿ, ಸಮಸ್ಯೆಗಳಲ್ಲಿ ಪರಿಶೀಲಿಸಿ ಸರ್ಕಾರದಿಂದ ಸಿಗುವ ಸೌಲಭ್ಯಗಳ ಬಗ್ಗೆ ಮಾಹಿತಿ ನೀಡಲಾಗುತ್ತಿದೆ.

ಗಂಟಿಚೋರ್ಸ್ ಮತ್ತು ಗಿರಣಿಒಡ್ಡರ ಜಾತಿ ಒಂದೇ ಎಂದು ಹೇಳಿದ ಅವರು, ಅಲೆಮಾರಿಗಳಿಗೆ ಸರಕಾರದ ಯೋಜನೆಗಳನ್ನು ಅರ್ಹರಿಗೆ ಸರಿಯಾಗಿ ದೊರೆಯುವಂತೆ ನೀಡಬೇಕು. ಯಾರೂ ಯೋಜನೆಗಳಿಂದ ವಂಚಿತರಾಗಬಾರದು. ಗ್ರಾಮ, ಪಟ್ಟಣ, ನಗರ ಪ್ರದೇಶಗಳಿಗೆ ಸಂಬಂಧಿಸಿದ ಅಧಿಕಾರಿಗಳು ಇವುಗಳ ಬಗ್ಗೆ ವಿಶೇಷ ಕಾಳಜಿ ವಹಿಸಿ. ಸರಿಯಾಗಿ ಕಾರ್ಯಗತವಾಗದಿದ್ದಲ್ಲಿ ಅವರನ್ನೇ ಹೊಣೆ ಮಾಡಿ ಮೇಲಾಧಿಕಾರಿಗಳಿಗೆ ಕ್ರಮಕ್ಕೆ ಸೂಚಿಸಲಾಗುವದು ಎಂದು ಹೇಳಿದರು.

ಈ ಸಂದರ್ಭದಲ್ಲಿ ಅನೇಕರು ಜಾತಿ, ಆದಾಯ ಪ್ರಮಾಣಪತ್ರಗಳು, ನಿವೇಶನಗಳ ಬಗ್ಗೆ ಅಲೆಮಾರಿಗಳ ಸ್ಥಿತಿ-ಗತಿ, ಸಮಸ್ಯೆಗಳನ್ನು ಪರಿಶೀಲಿಸಿ ಹೆಚ್ಚಿನ ಅನುದಾನ ದೊರೆಯುವಂತೆ ಮಾಡಬೇಕು, ರುದ್ರಭೂಮಿ ಒದಗಿಸುವದು ಸೇರಿದಂತೆ ಅನೇಕ ಬೇಡಿಕೆಗಳನ್ನು ಈಡೇರಿಸುವಂತೆ ಅಧ್ಯಕ್ಷರಿಗೆ ಮನವಿ ಮಾಡಿದರು. ಶಿರಹಟ್ಟಿಯ ಪ.ಜಾ ಸುಡಗಾಡಸಿದ್ದರ ಕ್ಷೇಮಾಭಿವೃದ್ಧಿ ಸಂಘದವರು ವಸತಿ ಯೋಜನೆಯಡಿ ನಿವೇಶನ ಹಾಗೂ ಮನೆ ಮಂಜೂರು ಮಾಡುವಂತೆ ಮನವಿ ಅರ್ಪಿಸಿದರು.

ತಹಸೀಲ್ದಾರ ವಾಸುದೇವ ಸ್ವಾಮಿ, ಸಮಾಜಕಲ್ಯಾಣ ಇಲಾಖೆ ತಾಲೂಕಾ ಸಹಾಯಕ ನಿರ್ದೇಶಕ ಗೋವಿಂದಪ್ಪ ಲಮಾಣಿ, ಗ್ರಾಮ ಆಡಳಿತಾಧಿಕಾರಿ ಕೃಷ್ಣಮೂರ್ತಿ, ಕಂದಾಯ ನಿರೀಕ್ಷಕ ನದಾಫ್, ತಾ.ಪಂ ಇಓ ಕೃಷ್ಣಪ್ಪ ಧರ್ಮರ, ಪಿಡಿಓ ಶೇಖರಗೌಡ ವಡಕನಗೌಡ್ರ, ಅಲೆಮಾರಿ ಜಿಲ್ಲಾ ನಾಮನಿರ್ದೇಶಿತ ಸದಸ್ಯರುಗಳಾದ ದುರ್ಗೇಶ ವಿಭೂತಿ, ಮೋಹನ ಭಜಂತ್ರಿ, ಅಲೆಮಾರಿ ಜನಾಂಗದ ಜಿಲ್ಲಾ ಗೌರವಾಧ್ಯಕ್ಷ ಕೆ.ಎಚ್. ಬೇಲೂರ, ಲೋಕೇಶ ಕಟ್ಟಿಮನಿ, ಬಸವರಾಜ ಹರಕೇರಿ, ಶಿವಕುಮಾರ ಕಡೆಮನಿ ಸೇರಿದಂತೆ ಅನೇಕರಿದ್ದರು.



ಸಮುದಾಯದ ಮಕ್ಕಳ ವಿದ್ಯಾಭ್ಯಾಸಕ್ಕೆ ಪಾಲಕರು ಆದ್ಯತೆ ನೀಡಬೇಕು. ಅಲೆಮಾರಿಗಳು ಮನೆ, ಸ್ವಯಂ ಉದ್ಯೋಗ, ಒಟ್ಟಾರೆಯಾಗಿ ಜೀವನದಲ್ಲಿ ಭದ್ರತೆ ದೊರೆತು ಸಮಾಜದ ಮುಖ್ಯವಾಹಿನಿಗೆ ಬರಬೇಕು. ಪ್ರತಿ ಹಂತದಲ್ಲಿ ಸರ್ಕಾರ ಸವಲತ್ತುಗಳನ್ನು ಒದಗಿಸುತ್ತಿದ್ದು, ಇದನ್ನು ಸದುಪಯೋಗ ಪಡಿಸಿಕೊಳ್ಳಬೇಕು ಎಂದು ಪಲ್ಲವಿ ಜಿ. ತಿಳಿಸಿದರು

**ಸರ್ವೋದಯ ಗ್ರಾಮೀಣಾಭಿವೃದ್ಧಿ ಕ್ರಿಯಾ ಸಂಸ್ಥೆಯ ವಾರ್ಷಿಕೋತ್ಸವದಲ್ಲಿ ಸಚಿವ ಎಚ್.ಕೆ. ಪಾಟೀಲ**

# ಸಂಸ್ಥೆಯ ಜನಸೇವೆ ಶ್ಲಾಘನೀಯ

■ವಿಜಯಸಾಕ್ಷಿ ಸುದ್ದಿ, ಗದಗ

ಸರ್ವೋದಯ ಸಮಗ್ರ ಗ್ರಾಮೀಣ ಅಭಿವೃದ್ಧಿ ಕ್ರಿಯಾ ಸಂಸ್ಥೆ (ಸಿರ್ಡಾ) ಗದಗ ಹಾಗೂ ಸರ್ವೋದಯ ಕೋ-ಆಪ್ ಕ್ರೆಡಿಟ್ ಸೊಸಾಯಿಟಿ ಗದಗ ವತಿಯಿಂದ ವಾರ್ಷಿಕೋತ್ಸವ ಹಾಗೂ ಸಾಧಕರಿಗೆ ಸನ್ಮಾನ ಕಾರ್ಯಕ್ರಮ ಇತ್ತೀಚಿಗೆ ನಗರದ ಜಿ.ಎಸ್. ಪಾಟೀಲ ಬಡಾವಣೆಯಲ್ಲಿಜರುಗಿತು.

ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ ವಹಿಸಿದ್ದ ಷ.ಬ್ರ.ಶ್ರೀ ಫಕ್ಕೀರೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು ಮಾತನಾಡಿ, ತೊಟ್ಟಿಲು ತೂಗುವ ಕೈ ಜಗತ್ತನ್ನೇ ತೂಗಬಲ್ಲದು ಎನ್ನುವುದಕ್ಕೆ ಈ ಸಂಸ್ಥೆ ಸಾಕ್ಷಿಯಾಗಿದೆ. ಸಂಸ್ಥೆಯು 18ನೇ ವರ್ಷ ಪೂರೈಸಿ ಮಹಿಳೆಯರ ಅಭಿವೃದ್ಧಿಯೊಂದಿಗೆ ಯಶಸ್ವಿಯಾಗಿ ನಡೆದುಕೊಂಡು ಬರುತ್ತಿರುವುದು ಶ್ಲಾಘನೀಯಎಂದರು.

ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಸಂಸ್ಥೆಯು ಹೆಮ್ಮರವಾಗಿ ಬೆಳೆದು ಜನಸೇವೆ ಮಾಡುತ್ತಿರುವುದು ಶ್ಲಾಘನೀಯ. ಗ್ರಾಮೀಣ ಅಭಿವೃದ್ಧಿಯಲ್ಲಿ ಸಂಸ್ಥೆಯು ಹೆಚ್ಚಿನ ಆದ್ಯತೆ ನೀಡಬೇಕೆಂದು ಕರೆ ನೀಡಿದರು. ಅಧ್ಯಕ್ಷತೆ ವಹಿಸಿದ್ದ ಶಾಸಕ ಜಿ.ಎಸ್. ಪಾಟೀಲ ಮಾತನಾಡಿ, ಸಂಸ್ಥೆಯು ಮಹಿಳೆಯರ ಸ್ವಾವಲಂಬನೆಗಾಗಿ ಸ್ವಯಂ ಉದ್ಯೋಗ ತರಬೇತಿ ನೀಡುವಂತಹ ಕಾರ್ಯಕ್ರಮಗಳನ್ನು ಹಾಕಿಕೊಂಡು ಮಹಿಳೆಯರ ಸಶಕ್ತೀಕರಣಕ್ಕೆ ಒತ್ತು ಕೊಡಬೇಕೆಂದು ಹೇಳಿದರು.

ವೇದಿಕೆಯ ಮೇಲೆ ಪ್ರಮುಖರಾದ ಲಲಿತಾ ಬಿ.ಅಸೂಟಿ, ಡಾ. ಎಂ.ಜೆ. ಜೇವಣ್ಣವರ, , ರಮಾಕಾಂತ ಎ.ಕುಲಕರ್ಣಿ, ಬಿ.ಬಿ. ಅಸೂಟಿ, ವಿದ್ಯಾಧರ ದೊಡ್ಡಮನಿ, ಡಾ. ಎಲ್.ಜಿ. ಹಿರೇಗೌಡರ, ಕೆ.ಎಸ್. ಮಾಶೆಟ್ಟಿ, ನೀಲಮ್ಮ ಬೋಳನವರ, ಬಸವರಾಜ ನರೇಗಲ್ ಪಾಲ್ಗೊಂಡಿದ್ದರು.

ಇದೇ ಸಂದರ್ಭದಲ್ಲಿ ಸಾಧನೆಗೈದ ಡಾ. ಎಂ.ಜೆ. ಜೇವಣ್ಣವರ, ಡಾ. ಎಲ್.ಜಿ. ಹಿರೇಗೌಡರ, ಪ್ರಕಾಶ ಸಂಘಮಿತ್ರ, ರೇಖಾ ಪೂಜಾರ, ಲಲಿತಾ ಇವರನ್ನು ಸನ್ಮಾನಿಸಿ ಗೌರವಿಸಲಾಯಿತು.

ನಾಗಮ್ಮ ಅಂಬಿಗೇರ ಸ್ವಾಗತಿಸಿದರು. ಶ್ರೀದೇವಿ ಶಿಶ್ವಿನಹಳ್ಳಿ ಪ್ರಾರ್ಥಿಸಿದರು. ವೆಂಕಟೇಶ ನಿರೂಪಿಸಿದರು. ರೇಖಾ ಪೂಜಾರ ವಂದನಾರ್ಪಣೆಗೈದರು.



# ಹನುಮಾನ್ ಮೂರ್ತಿಯ ಭವ್ಯ ಶೋಭಾಯಾತ್ರೆ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಟ್ಟಣದ ಶ್ರೀ ದತ್ತಾತ್ರೇಯ ದೇವಸ್ಥಾನದಲ್ಲಿ ನಡೆದಿರುವ ದತ್ತಯಾಗ ಹಾಗೂ ಹನುಮಾನ ಚಾಲೀಸಾ ಪಠಣ ಕಾರ್ಯಕ್ರಮದ ನಿಮಿತ್ತ ಶುಕ್ರವಾರ ಸಂಜೆ ಶ್ರೀ ಮಾರುತಿ, ಶ್ರೀ ಬ್ರಹ್ಮ ಚೈತನ್ಯ ಮಹಾರಾಜರ ದಿವ್ಯ ಪಾದುಕೆ, ಹೆಬ್ಬಳ್ಳಿಯ ಚೈತನ್ಯಾಶ್ರಮದ ಪ.ಪೂ ದತ್ತಾವಧೂತ ಮಹಾರಾಜರ ಭವ್ಯ ಶೋಭಾಯಾತ್ರೆ ನೂರಾರು ಸದ್ಭಕ್ತರ ಸಮ್ಮುಖದಲ್ಲಿ ಅದ್ದೂರಿಯಾಗಿ ಜರುಗಿತು.

ಅಖಿಲ ಕರ್ನಾಟಕ ಬ್ರಾಹ್ಮಣ ಅಭಿವೃದ್ಧಿ ನಿಗಮದ ಹಿಂದಿನ ಸದಸ್ಯ ಮದನ ಕುಲಕರ್ಣಿ, ವಿವೇಕ ಕುಲಕರ್ಣಿ, ಗದಗ ಜಿಲ್ಲಾ ಬ್ರಾಹ್ಮಣ ಸಂಘದ ಅಧ್ಯಕ್ಷ ವೆಂಕಟೇಶ ಕುಲಕರ್ಣಿ, ಸ್ವಾಗತ ಸಮಿತಿ ಗೌರವಾಧ್ಯಕ್ಷ ಡಾ, ಜಿ.ಕೆ. ಕಾಳೆ, ಅಧ್ಯಕ್ಷ ಶ್ರೀಪಾಧಭಟ್ಟ ಜೋಷಿ, ಶ್ರೀ ದತ್ತ ಭಕ್ತ ಮಂಡಳಿ ಅಧ್ಯಕ್ಷ ಡಾ. ನಾಗರಾಜ ಗ್ರಾಮಪುರೋಹಿತ, ಕಾರ್ಯದರ್ಶಿ ರಘುನಾಥ ಕೊಂಡಿ ಶೋಭಾಯಾತ್ರೆಗೆ ಚಾಲನೆ ನೀಡಿದರು.

ಶ್ರೀ ರಾಮ ಮಂದಿರದಿಂದ ಪ್ರಾರಂಭವಾದ ಶೋಭಾಯಾತ್ರೆಯು ಬಸ್ ನಿಲ್ದಾಣ, ಜಕ್ಕಲಿ ಕ್ರಾಸ್, ಹಳೆ ಬಸ್ ನಿಲ್ದಾಣ, ಡಾ. ಕಾಳೆ ಆಸ್ಪತ್ರೆ ಮಾರ್ಗದಿಂದ ಶ್ರೀ ದತ್ತಾತ್ರೇಯ ದೇವಸ್ಥಾನಕ್ಕೆ ತಲುಪಿತು. ದೇವಸ್ಥಾನದಲ್ಲಿ ದೂಳಿ ಪಾದಪೂಜೆ ಜರುಗಿತು. ಈ ಸಮಯದಲ್ಲಿ ನರೇಗಲ್ಲ ಹಾಗೂ ಸುತ್ತಮುತ್ತಲಿನ ಗ್ರಾಮದ ಸದ್ಭಕ್ತರು, ಹೆಬ್ಬಳ್ಳಿ ಚೈತನ್ಯಾಶ್ರಮದವರು ಪಾಲ್ಗೊಂಡಿದ್ದರು.



**ಹೊರರಾಜ್ಯ ತಲುಪಿದ ಅಷ್ಟಭುಜ ದೇವಿ ಮೂರ್ತಿ । ಶಿಗ್ಲಿಯ ಕೀರ್ತಿಗೆ ಗರಿ ಮೂಡಿಸಿದ ಶಿಲ್ಪಿ ಚಂದ್ರು ಪತ್ತಾರ**

# ಇಂಧೋರ್‌ನಲ್ಲಿ ಮನಗೆದ್ದ ಲಕ್ಷ್ಮೇಶ್ವರದ ಶಿಲ್ಪಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ದೇವರ ಮೂರ್ತಿಗಳನ್ನು ಸಿದ್ಧಪಡಿಸುವದು ಒಂದು ಅದ್ಭುತ ಕಲೆ. ಶಿಲೆಯಲ್ಲಿ ತಮ್ಮ ಕೈಚಳಕದಿಂದ ಸಿದ್ಧಪಡಿಸುವ ಮೂರ್ತಿಗಳು ನಿತ್ಯ ಪೂಜೆಗೊಳ್ಳುತ್ತವೆ. ಅಂತಹ ಅದ್ಭುತ ಕಲೆಯ ಮೂಲಕ ಲಕ್ಷ್ಮೇಶ್ವರ ಭಾಗದಲ್ಲಿ ಹೆಸರು ಮಾಡಿರುವ ಶಿಗ್ಲಿ ಗ್ರಾಮದ ಅಪರೂಪದ ಶಿಲ್ಪಿ ಚಂದ್ರು ಪತ್ತಾರ. ಇದೀಗ ಅವರು ತಯಾರಿಸಿದ ದೇವಿಯ ಮೂರ್ತಿಯೊಂದು ಮಧ್ಯಪ್ರದೇಶದ ಇಂಧೋರ್‌ನಲ್ಲಿ ಸ್ಥಾಪನೆಗೊಳ್ಳಲಿದ್ದು, ಶಿಗ್ಲಿಯ ಕೀರ್ತಿಗೆ ಗರಿ ಮೂಡಿಸಿದಂತಾಗಿದೆ.

ಕಲೆ ಎಲ್ಲರಿಗೂ ಒಲಿಯವುದಿಲ್ಲ. ಅದನ್ನು ಒಲಿಸಿಕೊಳ್ಳಲು ನಿರಂತರ ಸಾಧನೆ ಅಗತ್ಯ ಎನ್ನುವಂತೆ ಚಂದ್ರು ಪತ್ತಾರ ಅವರು ಅಪರೂಪದ ಶಿಲ್ಪಿಯಾಗಿದ್ದು, ಸುಮಾರು 12-13 ವರ್ಷಗಳಿಂದ ಈ ಕಲೆಯನ್ನು ಮೈಗೂಡಿಸಿಕೊಂಡು ಬಂದಿದ್ದಾರೆ. ನೂರಾರು ಮೂರ್ತಿಗಳನ್ನು ಹಾಗೂ ರಥಗಳನ್ನು ಸಿದ್ಧಪಡಿಸಿರುವ ಇವರು ತಮ್ಮ ರಚನೆಗಳ ವಿಡಿಯೋ, ಫೋಟೋಗಳನ್ನು ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡುತ್ತಿದ್ದರು. ಅದನ್ನು ನೋಡಿದ ರಾಜ್ಯ ಹಾಗೂ ಬೇರೆ ಬೇರೆ ರಾಜ್ಯಗಳ ಅನೇಕರು ಪ್ರಶಂಸೆ ವ್ಯಕ್ತಪಡಿಸಿದ್ದರು. ಆದರೆ ಕಳೆದ 2 ತಿಂಗಳ ಹಿಂದೆ ಮಧ್ಯಪ್ರದೇಶದ ಇಂಧೋರ್‌ನಲ್ಲಿನ ಜನರು ಇವರ ಕಲೆಯನ್ನು ಕಂಡು ಅದರಲ್ಲಿನ ದೂರವಾಣಿ ಸಂಖ್ಯೆಯಿಂದ ಚಂದ್ರು ಪತ್ತಾರ ಅವರನ್ನು ಸಂಪರ್ಕಿಸಿ, ಅಷ್ಟಭುಜಗಳುಳ್ಳ ದುರ್ಗಾ ಮಾತೆಯ ಮೂರ್ತಿಯನ್ನು ಕೃಷ್ಣ ಶಿಲೆಯಲ್ಲಿ ಮಾಡಿಕೊಡಲು ವಿನಂತಿಸಿದ್ದರು.

ಮೂರ್ತಿಯ ಸ್ಪಷ್ಟ ಚಿತ್ರಣಕ್ಕಾಗಿ ಚಂದ್ರು ಪತ್ತಾರ ಮೊದಲು ಅವರಿಗೆ ವಾಟ್ಸಪ್ ಮೂಲಕ ದುರ್ಗಾಮಾತೆಯ ಮೂರ್ತಿಯ ಚಿತ್ರವನ್ನು ತೆಗೆದು ಕಳಿಸಿದಾಗ ಅದರಂತೆ ಶಿಲೆಯಲ್ಲಿ ಮೂರ್ತಿಯನ್ನು ಸಿದ್ಧಪಡಿಸಿಲು ಸೂಚಿಸಿದ್ದರು. ಎರಡು ತಿಂಗಳ ಸತತ ಪರಿಶ್ರಮದಿಂದ ಮೂರ್ತಿಯನ್ನು ಸಿದ್ಧಪಡಿಸಲಾಗಿದ್ದು, ನಿರೀಕ್ಷೆಗೂ ಮೀರಿ ಅದ್ಭುತವಾಗಿ ಮೂರ್ತಿ ಮೂಡಿ ಬಂದಿದೆ. ಇದೀಗ ಮೂರ್ತಿಯನ್ನು ಬೆಂಗಳೂರಿನಿಂದ ರೈಲ್ವೆ ಮುಖಾಂತರ ಮಧ್ಯಪ್ರದೇಶ ರಾಜ್ಯದ ಇಂಧೋರ್‌ಗೆ ಕಳಿಸಿಕೊಟ್ಟಿದ್ದು, ಅವರ ಕುಟುಂಬದವರ ಮೊಗದಲ್ಲಿ ಸಂತಸ ಮೂಡಿಸಿದೆ. ಅಲ್ಲಿ ಮೂರ್ತಿಯನ್ನು ಪಡೆದುಕೊಂಡವರು ಪತ್ತಾರರನ್ನು ಸಂಪರ್ಕಿಸಿ ಅಪಾರ ಮೆಚ್ಚುಗೆ ವ್ಯಕ್ತಪಡಿಸಿದ್ದು, ಅವರ ಕಲೆಗೆ ಶುಭ ಹಾರೈಸಿದ್ದಾರೆ.





ಶಿಗ್ಲಿ ಎಂಬ ಸಣ್ಣ ಗ್ರಾಮದಿಂದ ಮಧ್ಯಪ್ರದೇಶದ ಇಂಧೋರ್‌ವರೆಗೂ ನಮ್ಮಲ್ಲಿ ಸಿದ್ಧವಾದ ಮೂರ್ತಿಯನ್ನು ಸ್ಥಾಪಿಸಲು ತೆಗೆದುಕೊಂಡು ಹೋಗಿರುವದು ನಿಜಕ್ಕೂ ನಮ್ಮ ಭಾಗಕ್ಕೆ ಹೆಮ್ಮೆಯ ವಿಷಯವಾಗಿದೆ. ಕಲೆ ಎನ್ನುವುದು ಒಂದು ತಪಸ್ಸು. ಅದನ್ನು ಮನಸಾರೆ ಮಾಡಿದರೆ ಕಲಾದೇವಿ ನಮ್ಮ ಕೈ ಹಿಡಿದು ನಡೆಸುತ್ತಾಳೆ ಎನ್ನುವದಕ್ಕೆ ಬೇರೆ ರಾಜ್ಯದಲ್ಲಿ ನಮ್ಮ ಕಲೆಗೆ ಬೆಲೆ ದೊರಕಿರುವದೇ ಸಾಕ್ಷಿಯಾಗಿದೆ.

**- ಚಂದ್ರು ಪತ್ತಾರ.**
**ಶಿಲ್ಪಿ, ಶಿಗ್ಲಿ.**

ಚಂದ್ರು ಪತ್ತಾರ ನಮ್ಮ ಭಾಗದಲ್ಲಿಯೇ ಹೆಮ್ಮೆಯ ಕಲಾವಿದರಾಗಿದ್ದು, ಇವರಲ್ಲಿ ಸಿದ್ಧವಾದ ಅನೇಕ ತೇರುಗಳು, ಮೂರ್ತಿಗಳು ರಾಜ್ಯದಲ್ಲಿಯೇ ಹೆಸರು ಮಾಡಿದೆ. ಇದೀಗ ಮಧ್ಯಪ್ರದೇಶದವರೆಗೂ ಶಿಗ್ಲಿಯ ಕಲೆ ತಲುಪಿರುವದು ನಮ್ಮ ಭಾಗಕ್ಕೆ ಸಂದ ಗೌರವವಾಗಿದೆ. ಇದಕ್ಕೆ ಶಿಗ್ಲಿಯ ಸಮಸ್ತ ನಾಗರಿಕರ ಪರವಾಗಿ ಅವರಿಗೆ ಧನ್ಯವಾದಗಳನ್ನು ಅರ್ಪಿಸುತ್ತೇವೆ.

**- ವೀರಣ್ಣ ಪವಾಡದ.**
**ಸಮಾಜ ಸೇವಕರು.**


ಕರ್ನಾಟಕ ಸರ್ಕಾರ

**ಗ್ರಾಮ ಪಂಚಾಯತ ರಾಜೂರ, ತಾಲೂಕ ॥ ಗಜೇಂದ್ರಗಡ, ಜಿಲ್ಲಾ ॥ ಗದಗ**

ಕ್ರ.ಸಂ.ಗ್ರಾ.ಪಂ./ರಾ/ನರೇಗಾ/ದ.ಪ.ಪ್ರ/2024-25 **E mail : rajuru.ron.gdg@gmail.com** ದಿನಾಂಕ : 06/12/2024

**ದರಪಟ್ಟಿ ಪ್ರಕಟಣೆ**

ಅಧ್ಯಕ್ಷರು/ಪಂಚಾಯತ ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತ, ರಾಜೂರ. 2024-2025 ನೇ ಸಾಲಿನ ಮಹಾತ್ಮಾಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿಯಲ್ಲಿ ಅನುಷ್ಠಾನಗೊಳ್ಳುವ ಈ ಕೆಳಕಂಡ ಕಾಮಗಾರಿಗಳಿಗೆ ಐಟಂವಾರು ಸಾಮಾಗ್ರಿ ಮೊತ್ತಕ್ಕೆ ಸಾಮಗ್ರಿಗಳನ್ನು ಪೂರೈಸುವ ಸಂಬಂಧ ದರಪಟ್ಟಿ ಆಹ್ವಾನಿಸಲಾಗಿದೆ. ಇದರ ಪ್ರಯುಕ್ತ ಜಿಲ್ಲಾ ಡಿ.ಪಿ.ಸಿ ಲಾಗಿನ್‌ನಲ್ಲಿ ನೊಂದಾಯಿತ ಆಸಕ್ತ ಸರಬರಾಜುದಾರರು ದರಪಟ್ಟಿಯನ್ನು ಸಲ್ಲಿಸಬಹುದಾಗಿದ್ದು ವಿವರ ಮತ್ತು ವೇಳಾಪಟ್ಟಿ ಈ ಕೆಳಗಿನಂತೆ ಇರುತ್ತದೆ. **ಕಾಮಗಾರಿಯ ಹೆಸರು ಮತ್ತು ಅಂದಾಜು ಮೊತ್ತದ ವಿವರ**

| ಕ್ರ ಸಂ | ಕಾಮಗಾರಿಗಳ ಹೆಸರು | ಟೆಂಡರ್ ಮೊತ್ತ | ಖಾಲಿ ಟೆಂಡರ್ ಫಾರಂ ಬೆಲೆ (ರೂ. ಗಳಲ್ಲಿ) | ಷರಾ |
|---|---|---|---|---|
| 01 | 2024-25ನೇಯ ಸಾಲಿನ ರಾಜೂರ ಗ್ರಾಮದ ಶಿವನಗೌಡ ಪಾಟೀಲ ಇವರ ಪ್ಲಾಟನಲ್ಲಿ ಬಿಳೆಕಲ್ಲ ಇವರ ಮನೆಯಿಂದ ಮುಖ್ಯ ವರೆಗೆ ಸಿ ಸಿ ರಸ್ತೆ | 334000-00 | 500-00 | ಖಾಲಿ ಟೆಂಡರ್ ಫಾರ್ಮ ಗ್ರಾಮ ಪಂಚಾಯತಿ-ಯಿಂದ ಪಡೆದು ಸಲ್ಲಿಸುವುದು |
| 02 | 2024-25ನೇಯ ಸಾಲಿನ ರಾಜೂರ ಗ್ರಾಮದ ಪಡಿಯಪ್ಪ ತಳವಾರ ಇವರ ಮನೆಯ ಹತ್ತಿರ ಸಿ ಸಿ ರಸ್ತೆ ನಿರ್ಮಾಣ | 170000-00 | 500-00 | |
| 03 | 2024-25ನೇಯ ಸಾಲಿನ ರಾಜೂರ ಗ್ರಾಮದ ರಮೇಶ ಗೂಳಿ ಇವರ ಮನೆಯ ಹತ್ತಿರ ಸಿ ಸಿ ರಸ್ತೆ ನಿರ್ಮಾಣ | 254000-00 | 500-00 | |
| 04 | 2024-25ನೇಯ ಸಾಲಿನ ರಾಜೂರ ಗ್ರಾಮದ ಅಂದಪ್ಪ ಹೊಗರಿ ಇವರ ಮನೆಯಿಂದ ಮೂಗನೂರ ಇವರ ಮನೆಯ ವರೆಗೆ ಸಿ ಸಿ ರಸ್ತೆ ನಿರ್ಮಾಣ | 84000-00 | 500-00 | |
| 05 | 2024-25ನೇಯ ಸಾಲಿನ ರಾಜೂರ ಗ್ರಾಮದ ದೇವಲ್ಲೇವ್ವ ರಾಠೋಡ ಇವರ ಮನೆಯಿಂದ ಬಾಲಪ್ಪ ರಾಠೋಡ ಇವರ ಮನೆಯ ವರೆಗೆ ಸಿ ಸಿ ರಸ್ತೆ ನಿರ್ಮಾಣ | 83000-00 | 500-00 | |
| 06 | 2024-25ನೇಯ ಸಾಲಿನ ರಾಜೂರ ಗ್ರಾಮದ ಈರಣ್ಣ ಇಟಗಿ ಇವರ ಮನೆಯಿಂದ ಇಮಾಂಬಿ ನಧಪ್ ಇವರ ಮನೆಯ ವರೆಗೆ ಸಿ ಸಿ ರಸ್ತೆ ನಿರ್ಮಾಣ | 84000-00 | 500-00 | |
| 07 | 2024-25ನೇಯ ಸಾಲಿನ ದಿಂಡೂರ ಗ್ರಾಮದ ಮಸೂತಿ ಹತ್ತಿರ ಸಿಸಿ ರಸ್ತೆ ನಿರ್ಮಾಣ | 84000-00 | 500-00 | |
| 08 | 2024-25ನೇಯ ಸಾಲಿನ ದಿಂಡೂರ ಗ್ರಾಮದ ದೇವಪ್ಪ ಮೇಟಿ ಇವರ ಮನೆಯಿಂದ ಕಳಕಪ್ಪ ಮೇಟಿ ಇವರ ಮನೆಯವರೆಗೆ ಸಿಸಿ ರಸ್ತೆ ನಿರ್ಮಾಣ | 85000-00 | 500-00 | |
| 09 | 2024-25ನೇಯ ಸಾಲಿನ ದಿಂಡೂರ ಗ್ರಾಮದ ಸಂಗಮ್ಮ ಕುರುಮನಾಳ ಇವರ ಮನೆಯಿಂದ ಶೇಖಪ್ಪ ಮೇಟಿ ಇವರ ಮನೆಯವರೆಗೆ ಸಿಸಿ ರಸ್ತೆ ನಿರ್ಮಾಣ | 85000-00 | 500-00 | |
| 10 | 2024-25ನೇಯ ಸಾಲಿನ ದಿಂಡೂರ ಗ್ರಾಮದ ಖಾಶೀಂಸಾಬ ಗದಗ ಇವರ ಮನೆಯ ಹತ್ತಿರ ಸಿಸಿ ರಸ್ತೆ ನಿರ್ಮಾಣ | 85000-00 | 500-00 | |
| 11 | 2024-25ನೇಯ ಸಾಲಿನ ಕಾಲಕಾಲೇಶ್ವರ ಗ್ರಾಮದ ಮಲ್ಲಯ್ಯ ಭೀಕ್ಷಾವತಿಮಠ ಇವರ ಮನೆಯಯಿಂದ ಮಲ್ಲನಗೌಡ ಪಾಟೀಲ ಇವರ ಮನೆಯವರೆಗೆ ಸಿಸಿ ರಸ್ತೆ ನಿರ್ಮಾಣ | 168000-00 | 500-00 | |
| 12 | 2024-25ನೇಯ ಸಾಲಿನ ಬೈರಾಪೂರ ಗ್ರಾಮದ ತಾಯವ್ವನ ಗುಡಿ ಮುಂದೆ ಸಿ ಸಿ ರಸ್ತೆ ನಿರ್ಮಾಣ | 85000-00 | 500-00 | |
| 13 | 2024-25ನೇಯ ಸಾಲಿನ ರಾಜೂರ ಗ್ರಾಮದ ಮಾಟರಂಗಿ ಇವರ ಮನೆಯ ಹತ್ತಿರ ಸಿ ಸಿ ರಸ್ತೆ ನಿರ್ಮಾಣ | 83000-00 | 500-00 | |
| 14 | 2024-25ನೇಯ ಸಾಲಿನ ದಿಂಡೂರ ಗ್ರಾಮದ ಶೇಖಪ್ಪ ಕಂಬಳಿ ಇವರ ಮನೆಯಿಂದ ಶರಣಪ್ಪ ಕುರುಮನಾಳ ಇವರ ಸಿಸಿ ರಸ್ತೆ ನಿರ್ಮಾಣ | 85000-00 | 500-00 | |
| 15 | 2024-25ನೇಯ ಸಾಲಿನ ಬೈರಾಪೂರ ತಾಂಡಾ ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯ ಆಟದ ಮೈದಾನ ಕಬ್ಬಡಿ ಕೋರ್ಟ | 153000-00 | 500-00 | |

**ಅರ್ಹ ವೆಂಡರ್ ಏಜೆನ್ಸಿಗಳಿಂದ ಖಾಲಿ ದರಪಟ್ಟಿ ಫಾರಂಗಾಗಿ ಅರ್ಜಿ ಸ್ವೀಕರಿಸುವ ವಿವರ** : (1) ದರಪಟ್ಟಿ ಅವಧಿ **09-12-2024** ರಿಂದ **18-12-2024** ರ ವರೆಗೆ (2) ಭರ್ತಿ ಮಾಡಿದ ಅರ್ಜಿಗಳನ್ನು ಸಲ್ಲಿಸುವ ಕೊನೆಯ ದಿನಾಂಕ : **18-12-2024** ಮಧ್ಯಾಹ್ನ 12.30 ಘಂಟೆಯವರೆಗೆ. (3) ದರಪಟ್ಟಿ ತೆರೆಯುವ ದಿನಾಂಕ : **18-12-2024** ಮಧ್ಯಾಹ್ನ 12.30 ಘಂಟೆಯ ನಂತರ. (4) ಅರ್ಜಿ ಸಲ್ಲಿಸುವ ಆಸಕ್ತ ನೊಂದಾಯಿತರು ಪ್ರತ್ಯೇಕವಾಗಿ ದರಪಟ್ಟಿಗಳನ್ನು ಸಲ್ಲಿಸತಕ್ಕದ್ದು. (5) ಜಿಲ್ಲಾ ಪಂಚಾಯತ ಡಿ.ಪಿ.ಸಿ ಲಾಗಿನ್‌ನಲ್ಲಿ ನೊಂದಾಯಿತ ಆಸಕ್ತ ಸರಬರಾಜುದಾರರು ಮಾತ್ರ ದರಪಟ್ಟಿಯನ್ನು ಸಲ್ಲಿಸಬಹುದು. (6) ಷರತ್ತುಗಳು ಹಾಗೂ ಸಾಮಗ್ರಿ ವಿವರ ಮತ್ತು ಇತರೆ ವಿಷಯಗಳು ಮಾಹಿತಿಗಾಗಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತ ಕಾರ್ಯಾಲಯ ಇವರನ್ನು ಕಛೇರಿ ಸಮಯದ ವೇಳೆಯಲ್ಲಿ ಸಂಪರ್ಕಿಸಿ ಪಡೆಯಬಹುದಾಗಿದೆ.

**ನಿಬಂಧನೆಗಳು** : 1) ಷರತ್ತು/ನಿಬಂಧನೆಗಳಿಗೆ,ಹೆಚ್ಚಿನ ಮಾಹಿತಿಗಾಗಿ ಕೆಲಸದ ದಿನಗಳಲ್ಲಿ ಹಾಗೂ ರಜಾ ದಿನಗಳನ್ನು ಹೊರತುಪಡಿಸಿ ಗ್ರಾಮ ಪಂಚಾಯತ ಕಾರ್ಯಾಲಯ,ರಾಜೂರ ಮಾಹಿತಿ ಪಡೆಯಬಹುದಾಗಿದೆ.

**ಸಹಿ/- ಅಧ್ಯಕ್ಷರು, ಗ್ರಾಮ ಪಂಚಾಯತ, ರಾಜೂರ**

ವಾಸಾಸಂಇ/ಗದಗ/ಕೆಎಸ್ಎಂಸಿಎ/449/2024-25

**ಸಹಿ/- ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಗ್ರಾಮ ಪಂಚಾಯತ, ರಾಜೂರ**


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka